

# ಸಿಹಿ ಕಹಿ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ

Editor : MARUTI BASAVANTAPPA HOSAMANI

Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ

ಬಾಗಲಕೋಟೆಯಿಂದ ಪ್ರಕಟಿತ

RNI REG No. : KARKAN/2016/75068

SIHI KAHI

KANNADA DAILY MORNING

BAGALKOT

Volume : 07 Issue : 243 Saturday 07-06-2025 E-mail : maruti.b.hosamani76@gmail.com Page: 4 Price : Rs. 1/-


## ಬಾಬಾ ಸಾಹೇಬ್ ಡಾ, ಬಿ.ಆರ್ ಅಂಬೇಡ್ಕರ್ ಅವರ ಹೆಸರನ್ನು ವಿಜಯಪುರ ರೈಲ್ವೆ ನಿಲ್ದಾಣಕ್ಕೆ ನಾಮಕರಣಕ್ಕೆ ಮನವಿ

**ಸಿಹಿ ಕಹಿ ಸುದ್ದಿ,**

**ಇಂಡಿ ಜೂ.06:** ಡಾ,ಬಿ.ಆರ್ ಅಂಬೇಡ್ಕರರು ವಿಜಯಪುರ ನಗರಕ್ಕೆ ಭೇಟಿ ನೀಡಿ ತಮ್ಮ ಹೆಜ್ಜೆ ಗುರುತುಗಳನ್ನು ಬಿಟ್ಟು ಹೋದ ಹಾಗೂ ಸಮಗ್ರ ಹರಿಜನರನ್ನು ಒಂದು ಗೂಡಿಸಿ ವಿಜಯಪುರದ ರಾಣಿ ಬಗೀಚಿನಲ್ಲಿ ಹರಿಜನರ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ್ದು. ಐತಿಹಾಸಿಕ ಹಾಗೂ ರೋಮಾಂಚನಕಾರಿ ಕ್ಷಣವಾಗಿದ್ದು, ಇದೇ ಸಂದರ್ಭದಲ್ಲಿ ಬೀಳಗಿಯ ಸೋಮನಗೌಡ ಫಕೀರ ಗೌಡ ಪಾಟೀಲ್ ಇವರ ಪ್ರಕರಣ-ಕ್ಕೆ ಸಂಬಂಧಿಸಿದಂತೆ ವಿಜಯಪುರ ನ್ಯಾಯಾಲಯದಲ್ಲಿ ಅವರ ಪರವಾಗಿ ವಾದ ಮಾಡಿ ಅವರಿಗೆ ಆಗಬೇಕಾಗಿದ್ದ ಗಲ್ಲು ಶಿಕ್ಷೆಯನ್ನು ತಪ್ಪಿಸಿದ್ದು ಅವರ ಕಾನೂನು ಪಾಂಡಿತ್ಯವನ್ನು ಪ್ರತಿಯೊಬ್ಬರು ಕೂಡ ಮೆಚ್ಚಲೇ ಬೇಕಾದ ವಿಷಯವಾಗಿದ್ದು, ಇಂತಹ ಹತ್ತು ಹಲವಾರು ಐತಿಹಾಸಿಕ ಕ್ಷಣಗಳಿಗೆ ವಿಜಯಪುರ ನಗರ




ಸಾಕ್ಷಿಯಾಗಿದ್ದು. ಇಂಥಹ ಐತಿಹಾಸಿಕ ಘಟನೆಗಳಿಂದ ತಳ ಸಮುದಾಯದ ಯುವಕರು ಪ್ರೇರೇಪಣೆ ಗೊಳ್ಳುವುದರಲ್ಲಿ ಸಂದೇಹವಿಲ್ಲ.

ಈ ಎಲ್ಲಾ ಕಾರಣಗಳಿಂದ ಹಾಗೂ ಬಾಬಾ ಸಾಹೇಬರು ಬಂದು ಹೋದ ಹೆಜ್ಜೆಗಳ ಸವಿ ನೆನಪಿ ಗೋಸ್ಕರ ವಿಜಯಪುರ ರೈಲ್ವೆ ನಿಲ್ದಾಣಕ್ಕೆ ಮಹಾ ಮಾನತಾವಾದಿ, ಸಂವಿಧಾನ ಶಿಲ್ಪಿ ಡಾ, ಬಿ.ಆರ್ ಅಂಬೇಡ್ಕರ್ ರ ಹೆಸರನ್ನು ನಾಮಕರಣ ಮಾಡಬೇಕೆಂದು ವಿಜಯಪುರ ಜಿಲ್ಲೆಯ ಭೀಮ್ ಸರಕಾರ ಸಂಘಟನೆಯ ಅಭಿಪ್ರಾಯವಾಗಿದೆ. ಆದ್ದ-ರಿಂದ ಮಾನ್ಯ ಸಚಿವರು ಈ ವಿಷಯವನ್ನು ಗಣನೆಗೆ ತೆಗೆದು ಕೊಂಡು ಐತಿಹಾಸಿಕ ನಗರದ ರೇಲ್ವೆ ನಿಲ್ದಾಣಕ್ಕೆ ಡಾ, ಬಾಬಾ ಸಾಹೇಬರ ಅಂಬೇಡ್ಕರ ರೈಲು ನಿಲ್ದಾಣ ಎಂದು ನಾಮಕರಣ ಮಾಡಲು ಭೀಮ್ ಸರಕಾರ ತಾಲೂಕು ಅಧ್ಯಕ್ಷ ಆನಂದ ಅಗರಖೇಡ ಹಾಗೂ ಸಂಘಟನೆಯ ಮೂಲಕ ಇವತ್ತು ಇಂಡಿ ತಾಲೂಕು ಉಪ ವಿಭಾಗಧಿಕಾರಿಗಳಾದ ಅನುರಾಧ ವಸ್ತ್ರದ್ ರವರಿಗೆ ಭೀಮ್ ಸರಕಾರ ಸಂಘಟನೆ ವತಿಯಿಂದ ಮನವಿ ಸಲ್ಲಿಸಲಾಯಿತು, ಈ ಸಂದರ್ಭದಲ್ಲಿ ಭೀಮ್ ಸರಕಾರ ಸಂಘಟನೆಯ ಪ್ರಧಾನ ಕಾರ್ಯದರ್ಶಿ ಯಾದ ಅಶೋಕ್ ನಾಯ್ಕೋಡಿ, ತಾಲೂಕು ಸಂಚಾಲಕರಾದ ರಾಹುಲ್ ಮನಗೂಳಿ, ಅರವಿಂದ್ ಕಾಂಬಳೆ, ಮಹೇಶ್ ಶಿವಶರಣ, ಮೇಘರಾಜ್ ವಾಲಿಕಾರ್, ಶಿವಾನಂದ ಹರಿಜನ್, ಸೋಮು ಹಳ್ಳಿ, ಆಕಾಶ್ ಕಾಂಬಳೆ, ತುಕಾರಾಂ ಪವರ್, ಉದಯ್ ಪವರ್ ಉಪಸ್ಥಿತರಿದ್ದರು.

**ಜಿಲ್ಲಾ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಶಿವಾನಂದ.ಬಿ.ಹರಿಜನ.ಇಂಡಿ**

## ಖೋಟಾ ನೋಟು ಖದೀಮರನ್ನ ಅಂಧರ್ ಹಾಕಿದ – ಅಗ್ನಿ ಕೆಂಚರೆಡ್ಡಿ



**ಸಿಹಿ ಕಹಿ ಸುದ್ದಿ,**

**ಮಾನ್ವಿ ಜೂ.06 :** ತಾಲೂಕಲ್ಲಿ ಖೋಟಾ ನೋಟು ಚಲಾವಣೆ ದಂಧೆ ನಡೆಯುತ್ತಿದೆ ಎಂದು ಸಾರ್ವಜನಿಕ ವಲಯದಲ್ಲಿ ಚರ್ಚೆ ಇತ್ತು. ಆದರೆ ಈ ದೂರಿನ ಮೂಲಕ ಅಗ್ನಿ ಎಂದೇ ಹೆಸರು ವಾಸಿಯಾದ ಮಾನ್ವಿ ಪಿ.ಐ ಕೆಂಚರೆಡ್ಡಿ ಪತ್ತೆ ಹಚ್ಚುವ ಕೆಲಸ ಮಾಡಿದ್ದರಿಂದ 10 ಜನ ಖದೀಮರನ್ನು ಅಂಧರ್ ಹಾಕಿ ಮುದ್ದೆ ಮುರಿಯುವಂತೆ ಮಾಡಿದ್ದಾರೆ.



ಖೋಟಾ ನೋಟು ಖದೀಮರು ಮಾನ್ವಿ ಪಟ್ಟಣದ ಇಂಡಿಯನ್ ಓವರ್ ಸಿಸ್ ಬ್ಯಾಂಕ್ ನ ಜಮಾ ಖಾತೆಯ ಎಟಿಎಂಗೆ ಅಸಲಿ ನೋಟಿನ ಜೊತೆಗೆ 18 ಸಾವಿರ ಖೋಟಾ ನೋಟು ಹಾಕಿದ್ದಾರೆ. ಆದ-ರೆ ಮರು ದಿನ ನಮ್ಮ ಖಾತೆಗೆ ಹಣ ಜಮಾವಣೆಯಾಗಿಲ್ಲ ಎಂದು ಖದೀಮರ ತಿಳಿಸಿದಾಗ ಪರಿಶೀಲಣೆ ಯಿಂದ ಅಸಲಿಯಾಟ ಬಯಲಾಗಿದೆ.

ಅಸಲಿಯಾಟವನ್ನು ಮಾನ್ವಿ ಪಿ.ಐ ಅಗ್ನಿ ಕೆಂಚರೆಡ್ಡಿ ಅವರು ಪತ್ತೆ ಹಚ್ಚುತ್ತ ಸಾಗಿದಾಗ ಮಾನ್ವಿ ಸೇರಿದಂತೆ ನಾನಾ ತಾಲೂಕಿನ 10 ಜನ ಖೋಟಾ ನೋಟು ಖದೀಮರನ್ನು ಅಂಧರ್ ಹಾಕಿದ್ದರಿಂದ ಕೆಂಚರೆಡ್ಡಿ ಅವರನ್ನು ಸಂಘಟನಾಕಾರರು ಹಾಗೂ ಮಾನ್ವಿ ಜನತೆ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಹುಸೇನ್.ಭಾಷಾ.ನಕ್ಕುಂದಿ.ಮಾನ್ವಿ**

## ಇಂಜನೀಯರಿಂಗ್ ಕೋರ್ಸ ವಿಭಾಗಕ್ಕೆ ಸಿ.ಇ.ಟಿ ಕೌನ್ಸಿಲಿಂಗ್ ಪೂರ್ವ ತಯಾರಿ

**ಸಿಹಿ ಕಹಿ ಸುದ್ದಿ,**

**ಗದಗಜೂ.06:** ವಿದ್ಯಾಪೋಷಕಸಂಸ್ಥೆಧಾರವಾಡವತಿಯಿಂದ 2025–26 ನೇ. ಶೈಕ್ಷಣಿಕ ಸಾಲಿನಲ್ಲಿ ಇಂಜನೀಯರಿಂಗ್ ಕೋರ್ಸ ವಿಭಾಗಕ್ಕೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗಾಗಿ ಉಚಿತ ಸಿ.ಇ.ಟಿ ಕೌನ್ಸಿಲಿಂಗ್ ಪೂರ್ವ ತಯಾರಿ ಬಗ್ಗೆ ದಿ. 10–06–2025 ರಂದು ಮಧ್ಯಾಹ್ನ 12.00 ಗಂಟೆಗೆ ಆನ್ಲೈನ್ ಮೂಲಕ ಕಾರ್ಯಾಗಾರವನ್ನು ಆಯೋಜಿಸಿದೆ. ಈ ಕಾರ್ಯಾಗಾರಕ್ಕೆ ಗದಗ ತೋಂಟದಾರ್ಯ ಇಂಜನೀಯರಿಂಗ್ ಕಾಲೇಜಿನ ಕಂಪ್ಯೂಟರ್ ಸೈನ್ಸ್ ವಿಭಾಗದ ಮುಖ್ಯಸ್ಥರಾದ ಡಾ, ರಮೇಶ ಎಂ. ಬಡಿಗೇರ

ವಿದ್ಯಾಪೋಷಕ (ರಿ)

(ಬಡತನ ಶಿಕ್ಷಣಕ್ಕೆ ಅಡ್ಡಿಯಾಗಬಾರದು)

ಇವರು ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿ ವಿದ್ಯಾರ್ಥಿಗಳಿಗೆ ಪಿ.ಯು.ಸಿ ನಂತರದ ಅವಕಾಶಗಳು, ಇಂಜನೀಯರಿಂಗ್ ಕೋರ್ಸನಲ್ಲಿಯ ಅವಕಾಶಗಳು, ಇಂಜನೀಯರಿಂಗ್ ನಲ್ಲಿಯ ಬ್ರ್ಯಾಂಚುಗಳು, ರ್ಯಾಂಕಿಂಗ್ ಮತ್ತು ಕಟ್ಆಫ್ % , ಸೀಟ್ ಆಯ್ಕೆ ಪ್ರಕ್ರಿಯೆ, ಇಂಜನೀಯರಿಂಗ್ ನಂತರದ ಉದ್ಯೋಗಾವಕಾಶಗಳ ಮಾಹಿತಿ ನೀಡಲಿದ್ದಾರೆ. ಕಾರ್ಯಾಗಾರದಲ್ಲಿ ತಮ್ಮ ಭಾಗವಹಿಸುವಿಕೆಯನ್ನು ದಿನಾಂಕ 06–06–2025 ರ ಒಳಗಾಗಿ ವಿದ್ಯಾಪೋಷಕ ಸಂಸ್ಥೆಯ ಮೊಬೈಲ್ ನಂ– 9980125686 , 8861201828 ಸಂಪರ್ಕಿಸುವ ಮೂಲಕ ವಿದ್ಯಾರ್ಥಿ/ವಿದ್ಯಾರ್ಥಿನಿಯರು ತಮ್ಮ ಹೆಸರನ್ನು ನೋಂದಾಯಿಸ ಬೇಕು. ನಿಗದಿತ ಸಮಯಕ್ಕಿಂತ 10 ನಿಮಿಷ ಮುಂಚಿತವಾಗಿ ಇಲ್ಲಿನ https://us06web.zoom.us/j/83537478081?pwd=WjdwOThTQmVkS1ZtNmkvS1hka2g4dz09, ಮೀಟಿಂಗ್ ಆಯ್ ಡಿ: 835 3747 8081, ಪಾಸ್ ಕೋಡ: 123456 ಲಿಂಕ್ನಲ್ಲಿ ಹಾಜರಾಗ ಆಗಬೇಕು.

**– ಡಾ, ಪ್ರಭು ಗಂಜಿಹಾಳ ಮೊ–9448775346**

## ಟಿ.ಆರ್.ಪಿ.ಯ ಭರದಲ್ಲಿ ಮಾಧ್ಯಮ ದೃಷ್ಟಿಕೋನ ಬದಲಾಗುತ್ತಿದೆ

**ಜಮಖಂಡಿ :** ಮಾಧ್ಯಮ ಕ್ಷೇತ್ರದಲ್ಲಿ ಸುಳ್ಳು ಸುದ್ದಿಗಳು ಸಮುದಾಯಗಳಲ್ಲಿ ಬಿರುಕು ಮೂಡಿಸುವ ಸಾಧ್ಯತೆಯಿದೆ. ಟಿ.ಆರ್.ಪಿ. ಹೆಚ್ಚಿಸಿಕೊಳ್ಳುವ ಭರದಲ್ಲಿ ಮಾಧ್ಯಮದ ದೃಷ್ಟಿಕೋನ ಬದಲಾಗುತ್ತಿದೆ. ಪ್ರಜಾಪ್ರಭುತ್ವದಲ್ಲಿ ಮಾಧ್ಯಮ ಕ್ಷೇತ್ರ ನಾಲ್ಕನೇಯ ಆಧಾರ ಸ್ಥಂಭವಾಗಿದೆ ಎಂದು ಮಾಜಿ ಶಾಸಕ ಆನಂದ ನ್ಯಾಮಗೌಡ ಹೇಳಿದರು.

ನಗರದ ಬಾಗಲಕೋಟ ವಿಶ್ವವಿದ್ಯಾಲಯದ ಸಭಾ ಭವನದಲ್ಲಿ ಶುಕ್ರವಾರ ಪ್ರಸಾರಾಂಗ ವಿಭಾಗದಲ್ಲಿ ಹಮ್ಮಿಕೊಂಡಿದ್ದ ಸಮಾಜ ಮತ್ತು ಮಾಧ್ಯಮಗಳು ಕುರಿತು ಒಂದು ದಿನದ ವಿಚಾರ ಸಂಕಿರಣದಲ್ಲಿ ಅವರು ಮಾತನಾಡಿದರು.

ಸಮಾಜ ಸುಧಾರಣೆಯಲ್ಲಿ ಮಾಧ್ಯಮ ಪಾತ್ರ ಪ್ರಮುಖವಾಗಿದೆ. ಜನರು ಯಾರ ಮಾತುಗಳನ್ನು ನಂಬುತ್ತಾರೆಯೊ ಇಲ್ಲವೋ ! ಆದರೆ ಪತ್ರಿಕೆಯಲ್ಲಿ ಪ್ರಕಟಗೊಳ್ಳುವ ಸುದ್ದಿಗಳನ್ನು ಖಂಡಿತವಾಗಿ ನಂಬುತ್ತಾರೆ. ಟಿ.



ಆರ್.ಪಿ. ಹೆಚ್ಚಿಸುವ ಭರದಲ್ಲಿ ಪತ್ರಿಕೆ ಮತ್ತು ಇಲೆಕ್ಟ್ರಾನಿಕ್ ದೃಶ್ಯ ಮಾಧ್ಯಮದಲ್ಲಿ ವಿವರಣೆಯ ಜೊತೆಗೆ ತೀರ್ಪು ನೀಡುವಂತಹ ಹೇಳಿಕೆಗಳು ಕಡಿಮೆ ಆಗಬೇಕು. ಪತ್ರಿಕೆಗಳಲ್ಲಿ ವರದಿಗೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕಾಗಿದೆ ಎಂದರು.

ಬಾಗಲಕೋಟ ವಿಶ್ವ ವಿದ್ಯಾಲಯ ಆರಂಭಗೊಂಡು ಎರಡು ವರ್ಷಗಳು ಗತಿಸಿದ್ದು, ಸಾವಿರಾರು ವಿದ್ಯಾರ್ಥಿಗಳು ಅಧ್ಯಯನ ಮಾಡುತ್ತಿರುವ ಹಿನ್ನೆಲೆಯಲ್ಲಿ ಜಮಖಂಡಿಗೆ ವಿಶ್ವವಿದ್ಯಾಲಯ ತಂದಿರುವುದು ಸಾರ್ಥಕವಾಗಿದೆ. ದಿವಂಗತ ಸಿದ್ದು ನ್ಯಾಮಗೌಡರ ದೂರದೃಷ್ಟಿ ಯೋಜನೆ ಸಫಲಗೊಂಡಿದೆ. ವೇಗವಾಗಿ ಬೆಳೆಯುತ್ತಿರುವ ಬಾಗಲಕೋಟ ವಿಶ್ವ ವಿದ್ಯಾಲಯಕ್ಕೆ ಪ್ರತಿಯೊಬ್ಬರ ಸಹಕಾರ ಅಗತ್ಯವಾಗಿದೆ ಎಂದರು.

ಸಮಾರಂಭದ ದಿವ್ಯ ಸಾನಿಧ್ಯ ವಹಿಸಿದ್ದ ಓಲೇಮಠದ ಆನಂದ ದೇವರು ಮಾತನಾಡಿ, ಮಾಧ್ಯಮ ಎಂದರೆ ನಿಯತ್ತು. ಪಾರದರ್ಶಕ ಕ್ಷೇತ್ರವಾಗಿದೆ. ಮಾಧ್ಯಮಗಳು ನ್ಯಾಯ ಒದಗಿಸುವ ಕೆಲಸದಲ್ಲಿ ತೊಡಗಿಕೊಳ್ಳಬೇಕು.

ಬಡವರ, ನೊಂದವರ ಶಕ್ತಿಯಾಗಿ ಮಾಧ್ಯಮ ಕೆಲಸ ಮಾಡುತ್ತಿದೆ. ತಂದೆ–ತಾಯಿ ತಲೆ ತಗ್ಗಿಸುವ ಕೆಲಸವನ್ನು ಮಕ್ಕಳು ಮಾಡಬಾರದು. ಮಾಧ್ಯಮ ಸಮುದಾಯಗಳ ರಕ್ಷಣೆಯ ಶಕ್ತಿಯಾಗಿ ಕೆಲಸ ನಿರ್ವಹಿಸುತ್ತಿದೆ ಎಂದರು.

ಬಾಗಲಕೋಟ ವಿಶ್ವ ವಿದ್ಯಾಲಯದ ಕುಲಪತಿ ಪ್ರೊ. ಆನಂದ ದೇಶಪಾಂಡೆ ಅಧ್ಯಕ್ಷತೆ ವಹಿಸಿದ್ದರು.ವೇದಿಕೆಯಲ್ಲಿಕೊಪ್ಪಳ ವಿಶ್ವ ವಿದ್ಯಾಲಯದ ಕುಲಪತಿ ಡಾ. ಬಿ. ಕೆ. ರವಿ, ತುಮಕೂರಿನ ಡಾ. ಬಿ. ಡಿ. ಮುದ್ದೇಶ, ಮೈಸೂ-ರಿನ ಮಾಧ್ಯಮ ವಿಶ್ಲೇಷಕ ಡಾ. ಅಮ್ಮಸಂದ್ರ ಸುರೇಶ, ಬಳ್ಳಾ-ರಿಯ ಹಿರಿಯ ಪತ್ರಕರ್ತ ಪ್ರೊ. ಸಿ. ಮುಂಜುನಾಥ, ಬೆಂಗಳೂರು ವಿಶ್ವವಿದ್ಯಾನಿಲಯದ ನಿವೃತ್ತ ಪ್ರೊ. ಎನ್. ನರಸಿಂಹಮೂರ್ತಿ, ಡಾ. ಆರ್. ನಾಗರಾಜು, ಕುಲಸಚಿವ ಪ್ರೊ. ದಯಾನಂದ ಸಾವಕಾರ, ಡಾ. ಮಲ್ಲಿಕಾರ್ಜುನ ಮರಡಿ, ಚಿದಾನಂದ ಢವಳೇಶ್ವರ ಸಹಿತ ಇನ್ನೂ ಹಲವರು ಉಪಸ್ಥಿತ-ರಿದ್ದರು.

ಪೂಜಾ ಖಿದ್ರಾಪೂರ ಪ್ರಾರ್ಥಿಸಿದರು. ಪ್ರೊ. ಡಿ. ಜಿ. ಸಾವಕಾರ ಸ್ವಾಗತಿಸಿದರು. ಡಾ. ಆರ್. ನಾಗರಾಜ ಪ್ರಾಸ್ತಾವಿಕವಾಗಿ ಮಾತನಾಡಿದರು.ಮಲ್ಲಿಕಾರ್ಜುನ ಬಿದರಿಸೊಗಸಾಗಿನಿರೂಪಿಸಿದರು. ಶ್ವೇತಾ ಏಳೆಣ್ಣಿ ವಂದಿಸಿದರು.

## ಬಯಲು ತುಂಬರಗುದ್ದಿ ಸರ್ಕಾರಿ ಪ್ರೌಢ ಶಾಲೆಯಲ್ಲಿ – ವಿಶ್ವ ಪರಿಸರ ದಿನಾಚರಣೆ





**ಸಿಹಿ ಕಹಿ ಸುದ್ದಿ,**

**ಬಯಲು ತುಂಬರಗುದ್ದಿ ಜೂ.06 :** ಕೂಡ್ಲಿಗಿ ತಾಲೂಕಿನ ಬಯಲು ತುಂಬರಗುದ್ದಿ ಸರ್ಕಾರಿ ಪ್ರೌಢ ಶಾಲೆಯಲ್ಲಿ ವಿಶ್ವ ಪರಿಸರ ದಿನಾಚರಣೆಯ ಮಾಡುವ ಮೂಲಕ ಪರಿಸರವನ್ನು ಸಂರಕ್ಷಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಈ ಕರ್ತವ್ಯವನ್ನು ನಮಗೆಲ್ಲರಿಗೂ ನೆನಪಿಸುವ ದಿನವೇ ವಿಶ್ವ ಪರಿಸರ ದಿನ ಪ್ರತೀ ವರ್ಷ ಜೂನ್ 5 ರಂದು ವಿಶ್ವ ಪರಿಸರ ದಿನವನ್ನಾಗಿ ಆಚರಿಸಲಾಗುತ್ತದೆ. ನಾವು ನಮ್ಮ ಪರಿಸರದ ಬಗ್ಗೆ ತಿಳಿಯುವ,ಅದರಮಹತ್ವಅರಿಯುವಮಹತ್ತರವಾದ ದಿನವಿದು. ಪರಿಸರ ಸಂರಕ್ಷಣೆಗೆ ನಾವು ಸ್ವಯಂ ಪ್ರೇರಿತರಾಗಿ ಗಿಡ ನೆಟ್ಟು, ನೀರು ಹಾಕಿ, ಮರಗಳನ್ನು ಬೆಳೆಸ ಬೇಕಿದೆ. ಪರಿಸರದ ಮೌಲ್ಯವನ್ನು ಎಲ್ಲರೂ ಅರಿತುಕೊಂಡು ಮಲೀನ ಮಾಡದಂತೆ ಸಂರಕ್ಷಣೆ ಮಾಡುವಲ್ಲಿ ಶ್ರಮವಹಿಸ ಬೇಕಿದೆ. ಇನ್ನೂ ನಮ್ಮ ಆಪ್ತರ ಸಂತೋಷದ ಕ್ಷಣಗಳಿಗೆ ಕಾರಣರಾಗಲು ನಾವು ಯಾವುದೋ ಲಕ್ಷಾಂತರ ಮೌಲ್ಯದ ಉಡುಗ-ೊರೆ ನೀಡುವ ಬದಲು ಪರಿಸರಕ್ಕೆ ಪೂರಕವಾಗುವಂತೆ ಒಂದು ಗಿಡ ಕೊಟ್ಟರೆ ಅದು ಎಲ್ಲದಕ್ಕಿಂತಲೂ ಅಮೂಲ್ಯವಾದದ್ದು ಎನಿಸಿಕೊಳ್ಳುತ್ತದೆ. ಹೀಗೇ ಯಾವೊದೋ ಒಂದು ನೆಪದ್ಲಲಿ ಪ್ರತೀ ಮನೆಗಳಲ್ಲಿ ಒಂದು ಗಿಡ ನೆಟ್ಟರೆ ಸಾಕು, ತಾನಾಗಿಯೇ ಊರಿನಲ್ಲಿ ವನ ಸೃಷ್ಟಿಯಾಗುತ್ತದೆ. ಪರಿಸರ ಪ್ರೇಮಿ ಸಾಲುಮರದ ತಿಮ್ಮಕ್ಕ ಅವರಿಗೆ ಮರುಜನ್ಮ ನೀಡಿದ ಹಾಗೆ ಆಗುತ್ತದೆ ಎಂದರು. ಶಾಲೆಯ ಎಸ್.ಡಿ.ಎಮ್.ಸಿ ಅಧ್ಯಕ್ಷರಾದ ಕೆ.ಜಿ ನಾಗರಾಜ, ಈ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರು ವೀರಪ್ಪ, ನಾಗರಾಜ, ಮಂಜುನಾಥ್, ಕೊಟ್ರೇಶ್, ಎಲ್ಲಾ ಸಿಬ್ಬಂದಿಗಳು ವರ್ಗದವರು ಸೇರಿದಂತೆ ಇತರರು ಉಪಸ್ಥಿತರಿದ್ದರು.

**ಹೋಬಳಿ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಕೆ.ಎಸ್ ವೀರೇಶ್. ಕೆ.ಹೊಸಹಳ್ಳಿ**

## ತೇರದಾಳ ಪಿಎಸ್ಐ ವರ್ಗಾವಣೆ ಖಂಡಿಸಿ ಹನಗಂಡಿಯಲ್ಲಿ ರಸ್ತೆ ತಡೆ

**ತೇರದಾಳ :** ತೇರದಾಳ ಪೊಲೀಸ್ ಠಾಣೆಯ ಪಿಎಸ್ಐ ಅಪ್ಪಣ್ಣ ಐಗಳಿ ಅವರ ವರ್ಗಾವಣೆ ಆಗಿರುವುದನ್ನು ಖಂಡಿಸಿ, ಹನಗಂಡಿ ಗ್ರಾಮದಲ್ಲಿ ಜಮಖಂಡಿ–ಕಾಗವಾಡ ರಾಜ್ಯ ಹೆದ್ದಾರಿಯನ್ನು ಬಂದ್ ಮಾಡಿ ಟಯರ್ಗೆ ಬೆಂಕಿ ಹಚ್ಚಿ ಪ್ರತಿಭಟನೆ ನಡೆಸಿದ ಘಟನೆ ಶನಿವಾರ ನಡೆಯಿತು.

ಬೆಳಿಗ್ಗೆ 9 ಗಂಟೆ ಸಮಯದಲ್ಲಿ ಗ್ರಾಮದ ಬಸ್ ನಿಲ್ದಾಣ ಬಳಿ ಜಮಾಯಿಸಿದ ಗ್ರಾಮ ಪಂಚಾಯತ್ ಸದಸ್ಯರು, ಮುಖಂಡರು ಟಯರ್ಗೆ ಬೆಂಕಿ ಹಚ್ಚಿ ಘೋಷಣೆಗಳನ್ನು ಕೂಗಲು ಪ್ರಾರಂಭಿಸಿದರು.

ಘಟನೆ ಬಗ್ಗೆ ಮಾಹಿತಿ ತಿಳಿದು ಪೊಲೀಸರು ಗ್ರಾಮಕ್ಕೆ ದೌಡಾಯಿಸಿ ಪ್ರತಿಭಟನಾಕಾರರ ಮನವೊಲಿಸಲು ಪ್ರಯತ್ನಿಸಿದರು. ಆದರೆ ಪ್ರತಿಭನಾಕಾರರು ಯಾವುದಕ್ಕೂ ಜಗ್ಗದೆ ಎಸ್ಪಿ ಅಥವಾ ಐಜಿ ಬರುವವರೆಗೆ ಪ್ರತಿಭಟನೆ ಕೈ ಬಿಡುವುದಿಲ್ಲ ಎಂದು ಹಠ ಹಿಡಿದರು.

ತಕ್ಷಣಸ್ಥಳಕ್ಕೆಪಿಎಸ್ಐಅಪ್ಪಣ್ಣಐಗಳಿಆಗಮಿಸಿ ನಿಮ್ಮ ಪ್ರೀತಿ ಅಭಿಮಾನಕ್ಕೆ ನಾನು ಚಿರಋಣಿ. ನಾನೇ ವರ್ಗಾವಣೆ ಮಾಡಿಕೊಂಡಿದ್ದೇನೆ.



ನೀವು ಈ ರೀತಿ ಪ್ರತಿಭಟನೆ ಮಾಡುವುದ-ರಿಂದ ಮೇಲಾಧಿಕಾರಿಗಳು ತಪ್ಪು ತಿಳಿದುಕೊಳ್ಳುತ್ತಾರೆ ಎಂದು ಮನವಿ ಮಾಡಿದರು. ಇದಕ್ಕೂ ಪ್ರತಿಭಟನಾಕಾರರು ಒಪ್ಪಲಿಲ್ಲ. ಕೊನೆಗೆ ಬನಹಟ್ಟಿ ಸಿಪಿಐ ಸಂಜೀವ ಬಳಗಾರ ಗ್ರಾಮಕ್ಕೆ ಆಗಮಿಸಿ ರಸ್ತೆ ತಡೆ ತೆರವುಗೊಳಿಸಿ ಪ್ರತಿಭಟನಾಕಾರರನ್ನು ಸಮೀಪದ ದೇವಸ್ಥಾನದ ಆವರಣ-ಕ್ಕೆ ಕರೆದುಕೊಂಡು ಹೋಗಿ ಸರಕಾರಿ ನೌಕರರಿಗೆ, ಅಧಿಕಾರಿಗಳಿಗೆ, ಪೊಲೀಸರಿಗೆ ವರ್ಗಾವಣೆ ಎನ್ನುವುದು ಸಹಜ. ಐಗಳಿ ಅವರು ಒಳ್ಳೆಯ ಆಡಳಿತ ನಡೆಸಿದ್ದಾರೆ ಎನ್ನುವುದಕ್ಕೆ ನಿಮ್ಮ ಈ ಹೋರಾಟ ತೋ-ರಿಸುತ್ತದೆ.

ಮೇಲಾಧಿಕಾರಿಗಳಜತೆಗೆನಾನುಮಾತನಾಡಿ ನಿಮ್ಮ ಅಭಿಪ್ರಾಯ ತಿಳಿಸುತ್ತೇನೆ. ನನಗೆ ಸಮಯಕೊಡಿಎಂದುಮನವಿಮಾಡಿದರು.

ಪ್ರತಿ ವರ್ಷ ಐದಾರು ಪ್ರಕರಣಗಳು ನಮ್ಮೂ-ರಿನಿಂದ ದಾಖಲಾಗುತ್ತಿದ್ದವು. ಆದರೆ ಐಗಳಿ ಅವರು ಬಂದ ಮೇಲೆ ಒಂದು ಪ್ರಕರಣ ಕೂಡ ಠಾಣೆಯಲ್ಲಿ ದಾಖಲು ಆಗಿಲ್ಲ. ಎಂತಹ ದೊಡ್ಡ ಸಮಸ್ಯೆ ಬಂದರೂ ಕೂಡ ಹೊಂದಾಣಿಕೆ ಮಾಡಿಸಿ ಕಳುಹಿಸಿದ್ದಾರೆ. ಐಗಳಿ ಅವರ ವರ್ಗಾವಣೆ ಇಲಾಖೆ ಮಾಡಿದ್ದು ಅಲ್ಲ. ಬೇರೆ ಊರಿನ ವ್ಯಕ್ತಿಯ ಕಿರಿಕಿರಿಗೆ ಮಾಡಲಾಗಿದೆ. ಇದನ್ನು ನಾವು ಸಹಿಸುವುದಿಲ್ಲ.

ಇನ್ನೂ ಒಂದು ವರ್ಷ ಐಗಳಿ ಅವರು ತೇರದಾಳ ಠಾಣೆಗೆ ಪಿಎಸ್ಐ ಆಗಿ ಮುಂದುವರೆಯಬೇಕು. ಜೂನ್ ಎರಡರ ಒಳಗೆ ಆದೇಶ ತಿದ್ದುಪಡಿ ಆಗಬೇಕು. ಇಲ್ಲದಿದ್ದರೆ ಜೂನ್ 3 ರಿಂದ ಮತ್ತೆ ಪ್ರತಿಭಟನೆ ಪ್ರಾರಂಭಿಸಲಾಗುವುದು ಎಂದು ಹನಗಂಡಿ ಗ್ರಾಮಸ್ಥರು ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ಚಂದ್ರಶೇಖರ ಗುಬಚಿ, ಅಲ್ಲಾಬಕ್ಷ ಅಲಾಸ್, ಶಂಕರ ಹುದ್ದಾರ, ಕುಮಾರ ಕಾಂಬಳೆ,

ಪ್ರಕಾಶ ನಾರವ್ವಗೋಳ, ಹಸನ ಮೌಲಾನಾ ಪಕಾಲಿ, ಅಭಿಮಾನಿ ಗುಬಚಿ, ನಬೀಸಾಬ ಶಿಲ್ಲೇದಾರ, ಮಹಾದೇವ ಇಟಗೋನಿ, ಕರೆಪ್ಪಕೊಳೆನ್ನವರ,ಶಾನೂರರಾಮದುರ್ಗ, ರಸೂಲ ಬಾಗಿ ಹಾಗೂ ಇನ್ನೂ ಅನೇಕರು ಭಾಗವಹಿಸಿದ್ದರು.

## ಉಚಿತ ಬ್ಯಾಗ್, ಪಠ್ಯಪುಸ್ತಕ ವಿತರಿಸಿ ವಿದ್ಯಾರ್ಥಿಗಳಿಗೆ ಸ್ವಾಗತ

**ಮಹಾಲಿಂಗಪುರ :** ಸಮೀಪದ ರನ್ನಬೆಳಗಲಿ ಪಟ್ಟಣದ ಸರ್ಕಾರಿ ಪ್ರಾಥಮಿಕ ಹೆಣ್ಣು ಮಕ್ಕಳ ಶಾಲೆಯಲ್ಲಿ 2025–26 ನೇ ಸಾಲಿನ ಶೈಕ್ಷಣಿಕ ವರ್ಷದ ಶಾಲಾ ಪ್ರಾರಂಭೋತ್ಸವ, ಉಚಿತ ಪಠ್ಯ ಪುಸ್ತಕ ವಿತರಣೆ ಮತ್ತು ದಾಖಲಾತಿ ಆಂದೋಲನ ಕಾರ್ಯಕ್ರಮಗಳು ಅತ್ಯಂತ ಯಶಸ್ವಿಯಾಗಿ ಜರುಗಿದವು.

ಶಾಲೆಯ ಎಸ್.ಡಿ.ಎಂ.ಸಿ. ಅಧ್ಯಕ್ಷ ಯಮನಪ್ಪ ಆಲಗೂರ, ಪಟ್ಟಣ ಪಂಚಾಯತ್ ಸದಸ್ಯ ಪ್ರವೀಣ ಪಾಟೀಲ ಅವರು ಹೊಸದಾಗಿ ದಾಖಲೆಗೊಂಡ ವಿದ್ಯಾರ್ಥಿಗಳಿಗೆ ಉಚಿತ ಬ್ಯಾಗುಗಳನ್ನು ನೀಡುವುದರ ಮೂಲಕ, ಸಸಿಗೆ ನೀರುಣಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಮುಖ್ಯಶಿಕ್ಷಕಿ ಎಸ್.ಎಲ್.ಕತಾರೆ ಎಲ್ಲ ವಿದ್ಯಾರ್ಥಿಗಳಿಗೆ ಪಠ್ಯ ಪುಸ್ತಕ ವಿತರಿಸಿ ಶುಭ ಹಾರೈಸಿದರು.

ಎಸ್.ಡಿ.ಎಂ.ಸಿ. ಸದಸ್ಯ, ನ್ಯಾಯವಾದಿ ಸದಾಶಿವ ಹಳ್ಳೂರ ಮಾತನಾಡುತ್ತಾ,

ಶಿಕ್ಷಕರು ಮಕ್ಕಳೊಂದಿಗೆ ಮಕ್ಕಳಾಗಿ ಬೆರೆತು ಮಕ್ಕಳ ಕಲಿಕೆಗೆ ಪ್ರೋತ್ಸಾಹಿಸುತ್ತ, ಈ ವರ್ಷದಲ್ಲಿ ಹೆಚ್ಚಿನ ದಾಖಲಾತಿ ಆಗುವಂತೆ ಪ್ರಯತ್ನಿಸಬೇಕು. ನಾವು ಕೂಡ ಕೈಜೋಡಿಸುತ್ತೇವೆ ಮತ್ತು ವಿದ್ಯಾರ್ಥಿಗಳ ಕಲಿಕೆಗೆ ಬೇಕಾದಂತಹ ಸಂಪನ್ಮೂಲವನ್ನು ಸರ್ಕಾರದ ಸೇವೆಗಳ ಅಡಿಯಲ್ಲಿ ಸಾಧ್ಯವಾದಷ್ಟು ನಾವು ಕೂಡ ಭಾಗವಹಿಸಿ ಶೈಕ್ಷಣಿಕ ಪ್ರಗತಿಗೆ ಶ್ರಮಿಸುತ್ತೇವೆ ಎಂದರು.

ಇನ್ನೋರ್ವ ಸದಸ್ಯ ಶ್ರೀಶೈಲ ಬಬಲಾದಿ ಅವರು, ವಿದ್ಯಾರ್ಥಿ ಸಮೂಹಕ್ಕೆ ಸಿಹಿ ಭೋಜನ ಮಾಡಿಸಿ, ಪ್ರತಿ ತಿಂಗಳಲ್ಲಿ ಒಂದು ದಿನ ಈ ಸಿಹಿ ಬೋಜನವನ್ನು ಮುಂದುವರಿಸುತ್ತೇನೆ ಎಂದರು. ಶಾಲೆಯ ಎಸ್.ಡಿ.ಎಂ.ಸಿ. ಬಳಗದ ಜೊತೆಗೆ ಊರಿನ ಪ್ರಮುಖ ಬೀದಿಯಲ್ಲಿ ಸಂಚರಿಸಿ ದಾಖಲಾತಿ ಆಂದೋಲನವನ್ನು ಹಮ್ಮಿಕೊಂಡು ಪ್ರತಿ ಮನೆ ಮನೆಗೆ ಭೇಟಿ ನೀಡಿ ದಾಖಲಾತಿಯನ್ನು ಮಾಡಿಕೊಳ್ಳಲಾಯಿತು.

ಸದಾಶಿವ ಗುಲಗಂಜಿಕೊಪ್ಪ, ಈರಪ್ಪ ಲೋಹಾರ, ಮಂಜುನಾಥ ಪಾಟೀಲ, ಬಂದವ್ವ ಲಾಲಸಿಂಗಿ, ಮಾಲವ್ವ ಹಂಚಿನಾಳ, ಶಾಲಾ ಸಿಬ್ಬಂದಿಗಳಾದ ಎಸ್. ಎಚ್. ಮಾದರ, ಎಸ್. ಪಿ. ಜೋಶಿ, ಆರ್. ಡಿ. ಬಂಡಿ, ಹೆಚ್. ಬಿ. ಜಮಾದಾರ, ಆರ್. ಟಿ. ದಂಡಿನ, ಆರ್. ಎಮ್. ನೀಲಣ್ಣವರ, ಶೋಭಾ ವೀರಘಂಟಿ, ಕಾಳಮ್ಮ ಬಡಿಗೇರ, ಭಾರತಿ ಮೆಳ್ಳಿಗೇರಿ ಹಾಗೂ ವಿದ್ಯಾರ್ಥಿನಿಯರು, ಪಾಲಕರು ಹಾಜರಿದ್ದರು.

# ತುಂಗಭದ್ರಾ ಗೇಟ್ ನಂ.19ರ ಕಾಮಗಾರಿ ಜುಲೈ ಅಂತ್ಯದವರೆಗೆ ಪೂರ್ಣಗೊಳ್ಳಲಿದೆ: ಸಂಸದ ಕೆ.ರಾಜಶೇಖರ ಹಿಟ್ನಾಳ

**ಕೊಪ್ಪಳ :** ನಮ್ಮ ಭಾಗದ ರೈತರ ಜೀವ ನಾಡಿಯಾದ ತುಂಗಭದ್ರಾ ಜಲಾಶಯದ ಸ್ಟೀಲ್ ವೇ ಗೇಟ್ ನಂ.19ರ ಕಾಮಗಾರಿಯು 2025ರ ಜುಲೈ ಮಾಹೆಯ ಅಂತ್ಯದೊಳಗೆ ಪೂರ್ಣಗೊಳಿಸಲು ಯೋಜಿಸಲಾಗಿದೆ ಎಂದು ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ ಹೇಳಿದರು.

ಅವರು ಗುರುವಾರ ಕೊಪ್ಪಳ ಜಿಲ್ಲಾಡಳಿತ ಭವದಲ್ಲಿರುವ ಲೋಕಸಭಾ ಸದಸ್ಯರ ಕಛೇರಿಯಲ್ಲಿ ತುಂಗಭದ್ರಾ ಆಣೆಕಟ್ಟಿಗೆ ಹೊಸ ಸ್ಟೀಲ್‌ವೇ ಗೇಟುಗಳನ್ನು ಅಳವಡಿಸುವ ಕುರಿತು ಮಾಹಿತಿ ನೀಡಲು ಕರೆದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ಕಳೆದ ವರ್ಷ ಕೊಚ್ಚಿ ಹೋಗಿದ್ದ ತುಂಗಭದ್ರಾ ಜಲಾಶಯದ ಕ್ರಸ್ಟ್ ಗೇಟ್ ಸಂಖ್ಯೆ 19ಕ್ಕೆ ಸ್ಟಾಪ್ ಲಾಗ್ ಎಲಿಮೆಂಟ್‌ನ್ನು ಸರ್ಕಾರದ ಅಧಿಕಾರಿಗಳು ಹಾಗೂ ಗೇಟ್ ತಜ್ಞರಾದ ಕನ್ನಯ್ಯ ನಾಯ್ಡುಮತ್ತುಗೇಟ್ ತಯಾರಿಕಾಕಂಪನಿಗಳಾದಜಿಂದಾಲ್ ಸ್ಟೀಲ್ಸ್, ಹಿಂದೂಸ್ಥಾನಿ ಸ್ಟೀಲ್ಸ್ ಹಾಗೂ ನಾರಾಯಣ ಸ್ಟೀಲ್ಸ್ ಸಹಯೋಗದಲ್ಲಿ ಯಶಸ್ವಿಯಾಗಿ ಅಳವಡಿಸಲಾಯಿತು. ಇದಕ್ಕಾಗಿ ರಾಜ್ಯ ಸರ್ಕಾರವು ಬಹಳಷ್ಟು ಪ್ರಯತ್ನಗಳನ್ನು ಮಾಡಿತ್ತು. ಇದರಿಂದಾಗಿ ರೈತರ ಎರಡೂ ಬೆಳೆಗಳಿಗೆ ನೀರು ಕೊಡಲು ಅನುಕೂಲವಾಯಿತು ಎಂದರು.

ತುಂಗಭದ್ರಾ ಆಣೆಕಟ್ಟಿನ ಗೇಟ್‌ಗಳ ಸ್ಥಿತಿ–ಗತಿಗಳನ್ನು ಪರಿಶೀಲಿಸಿ ವರದಿ ಸಲ್ಲಿಸಲು ಕೇಂದ್ರ ಜಲ ಆಯೋಗವು (ಸಿ.ಡಬ್ಲ್ಯೂ.ಸಿ) ಒಂದು ಸಮಿತಿಯನ್ನು ರಚಿಸಿದ್ದು, ಸಿ.ಡಬ್ಲ್ಯೂ.ಸಿ.ಯ ನಿವೃತ್ತ ಅಧ್ಯಕ್ಷರಾದ ಎ.ಕೆ.ಬಜಾಜ್ ಅವರ ನೇತೃತ್ವದಲ್ಲಿ ತಾಂತ್ರಿಕ ಪರಿಣಿತರ ತಂಡವು 2025ರ ಏಪ್ರಿಲ್ 9ರಂದು ತುಂಗಭದ್ರಾ ಆಣೆಕಟ್ಟನ್ನು ಪರಿಶೀಲಿಸಿ, ಕಾಂಪ್ರೆನ್ಸಿವ್ ಹೆಲ್ತ್ ಓವರ್‌ವ್ಯೂವ್ (Comprehensive health overview) ಹಾಗೂ ಆಣೆಕಟ್ಟೆಯ ಸುರಕ್ಷತೆಯ ನಿರ್ವಹಣೆಯ ಬಗ್ಗೆ ಕೈಗೊಳ್ಳಬೇಕಾದ ಅಂಶಗಳ ವಿವರದ ವರದಿಯನ್ನು ನೀಡಿರುತ್ತಾರೆ.

ಎನ್.ಡಿ.ಎಸ್.ಎ ಅಧ್ಯಕ್ಷರಾದ ಅನೀಲ್ ಜೈನ್ ಅವರು



ತುಂಗಭದ್ರಾ ಆಣೆಕಟ್ಟನ್ನು ಪರಿಶೀಲಿಸಿ ಜಲಾಶಯದಲ್ಲಿ ಸಾಧ್ಯವಾದಷ್ಟು ಕಡಿಮೆ ಮಟ್ಟದಲ್ಲಿ ನೀರನ್ನು ಶೇಖರಿಸಲು ಹಾಗೂ ಆಣೆಕಟ್ಟಿನ ಕಾಂಪ್ರೆನ್ಸಿವ್ ಹೆಲ್ತ್ ಚೆಕಪ್ (Comprehensive health checkup) ಕೈಗೊಳ್ಳಲು ಸಲಹೆ ನೀಡಿರುತ್ತಾರೆ ಎಂದು ಹೇಳಿದರು.

ಕೆ.ಎಸ್.ಎನ್.ಡಿ.ಟಿ ಸರ್ವಿಸಸ್ ರವರು ಡೆ ಪೆನೆಟ್ರೇಷನ್ ಟೆಸ್ಟ್, ಫೆಸ್ಡ್ ಅರೈವ್ ಅಲ್ಟ್ರಾಸೊನಿಕ್ ಟೆಸ್ಟ್ ಮತ್ತು ವಿಜ್ವಲ್ ಇನ್ಸ್‌ಫೆಕ್ಷನ್ (Dye penetration test, Phased array ultrasonic test and Visual inspection) ಪರೀಕ್ಷೆಗಳನ್ನು ಜಲಾಶಯದ ಎಲ್ಲಾ 32 ಗೇಟುಗಳ ಮೇಲೆ ಕೈಗೊಂಡು 2025ರ ಮಾರ್ಚ್ 25ರಂದು ವರದಿ ನೀಡಿರುತ್ತಾರೆ. ಈ ವರದಿಯನ್ವಯ ಗೇಟುಗಳ ಬಹುತೇಕ ಭಾಗಗಳ ದಪ್ಪವು (ಥಿಕ್ನೆಸ್) ಮೂಲ ವಿನ್ಯಾಸಕ್ಕಿಂತ ಶೇಕಡಾ 40 ರಿಂದ 50 ರಷ್ಟು ಕಡಿಮೆಯಾಗಿರುವುದಾಗಿ ಹಾಗೂ ಎಲ್ಲಾ ಸ್ಟೀಲ್‌ವೇ ಗೇಟುಗಳನ್ನು ಬದಲಾಯಿಸಬೇಕಾಗುತ್ತದೆಂದು ತಿಳಿಸಿರುತ್ತಾರೆ.

ಇದಲ್ಲದೇ ಆಂದ್ರಪ್ರದೇಶ ಸರ್ಕಾರದ ಸಲಹೆಗಾರರು ಹಾಗೂ ಗೇಟುಗಳ ತಜ್ಞರಾದ ಎನ್.ಕನ್ನಯ್ಯನಾಯ್ಡು ಅವರು ಏಪ್ರಿಲ್ 8 ಮತ್ತು 9 ರಂದು ಆಣೆಕಟ್ಟುಗಳ ಸ್ಟೀಲ್‌ವೇ ಗೇಟುಗಳನ್ನು ಪರಿಶೀಲಿಸಿ ಎಂಡ್ ಕನೆಕ್ಷನ್‌ಗಳನ್ನು ಸದೃಡ (Strengthen) ಮಾಡಲು ಸಲಹೆ ನೀಡಿರುತ್ತಾರೆ. ಸ್ಟ್ರೆನಥೆನಿಂಗ್ ಆಫ್ ಗ್ರೀಡರ್ಸ್ ಟು ಎಂಡ್ ಬಾಕ್ಸ್ (Strengthening of girders to end box) ಕಾಮಗಾರಿ ಪ್ರಗತಿಯಲ್ಲಿರುತ್ತದೆ.

ಎನ್.ಡಿ.ಟಿ ವರದಿಯನ್ವಯ 2025–26ನೇ ಸಾಲಿನಲ್ಲಿ ಗೇಟುಗಳನ್ನು ಫುಲ್ ಲೋಡಿಂಗ್ (full loading) ಮಾಡಲು ಸಾಧ್ಯವಾಗದೇ ಇರುವುದರಿಂದ ಒಂದು ಬೆಳೆಗೆ ಹಾಗೂ ಕುಡಿಯುವ ನೀರನ್ನು ಪರಿಗಣಿಸಿ ಸಿಲ್ ಲೇವಲ್ (Sill level) ಮೇಲೆ 12 ರಿಂದ 15 ಅಡಿಯವರೆಗೆ ಮಾತ್ರ ನೀರನ್ನು ಶೇಖರಿಸಲು ಸಲಹೆ ನೀಡಿರುತ್ತಾರೆ ಎಂದರು.

ಎನ್.ಕನ್ನಯ್ಯ ನಾಯ್ಡು ಇವರ ಸಲಹೆಯಂತೆ ಆಣೆಕಟ್ಟೆಯ ಗೇಟುಗಳ ಸುರಕ್ಷತೆಯ ಹಿನ್ನಲೆಯಲ್ಲಿ 2025–26ನೇ ಸಾಲಿನ ಜಲಾಶಯದಲ್ಲಿ 1626.06 ಅಡಿಯವರೆಗೆ ಸಾಮರ್ಥ್ಯವನ್ನು 80 ಟಿ.ಎಂ.ಸಿ.ಗೆ ನಿರ್ಬಂಧಿಸಿ ನೀರನ್ನು ಸಂಗ್ರಹಿಸಬೇಕಾಗುತ್ತದೆ. ಈ ವಿಷಯದ ಬಗ್ಗೆ ತುಂಗಭದ್ರಾ ಮಂಡಳಿಯು ರಾಜ್ಯಗಳ ಅಭಿಪ್ರಾಯ ಪಡೆದು ಕ್ರಮ ಕೈಗೊಳ್ಳಬೇಕಾಗಿರುತ್ತದೆ ಎಂದು ಹೇಳಿದರು.

ಸ್ಟೀಲ್ವೇ ಗೇಟ್ ನಂ.19ರ ಸ್ಟಾಪ್ ಲಾಗ್ ಗೇಟ್ ಎಲಿಮೆಂಟ್ಸ್ (Stop log gate elements)ಗಳ ತೆಗೆಯುವುದು ಹಾಗೂ ಹೊಸ ಸ್ಟೀಲ್ವೇ ಗೇಟುಗಳನ್ನು ಅಳವಡಿಸುವ ಕಾಮಗಾರಿಯನ್ನು ರೂ.1.66 ಕೋಟಿಗಳಿಗೆ (ಜಿ.ಎಸ್.ಟಿ. ಹೊರತುಪಡಿಸಿ) ಎಂ/ಎಸ್ ಹಾರ್ಡ್‌ವೆರ್ ಟೂಲ್ಸ್ & ಮಷಿನರಿ ಪ್ರೈ.ಲಿ ಅಹಮದಾಬಾದ್, ಗುಜರಾತ್ ಇವರಿಗೆ ವಹಿಸಲಾಗಿದೆ. ಕಾಮಗಾರಿಯನ್ನು ಜುಲೈ–2025 ರೊಳಗೆ ಪೂರ್ಣಗೊಳಿಸಲು ಯೋಜಿಸಲಾಗಿದೆ. ಪ್ರಸ್ತುತ ಬಾಕಿ ಉಳಿದ 32 ಸ್ಟೀಲ್ವೇ ಗೇಟುಗಳನ್ನು ತೆಗೆದು ಹೊಸ ಸ್ಟೀಲ್ವೇ ಗೇಟುಗಳನ್ನು ಅಳವಡಿಸುವ ಕಾಮಗಾರಿಗಳಿಗೆ ರೂ.52 ಕೋಟಿ ಮೊತ್ತದ ಟೆಂಡರ್ ಕರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆಯಲ್ಲಿರುತ್ತದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಸಂಸದರ ಆಪ್ತ ಸಹಾಯಕರಾದ ಅರಣು,ವೀರಭದ್ರಪ್ಪನಾಯಕ,ವಾರ್ತಾ ಮತ್ತುಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ಡಾ. ಸುರೇಶ್ ಜಿ. ಸೇರಿದಂತೆ ವಿವಿಧ ಮಾಧ್ಯಮ ಪ್ರತಿನಿಧಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಶೀಘ್ರ ಕೊಪ್ಪಳದಲ್ಲಿ ಉರ್ದು ಶಾಲೆಯ ಹಳೆಯ ಸಹಪಾಠಿ ವಿದ್ಯಾರ್ಥಿಗಳಿಂದ ಸ್ನೇಹ ಸಮ್ಮಿಲನ



**ಕೊಪ್ಪಳ :** ನಗರದ ಸರಕಾರಿ ಬಾಲಕರ ಪದವಿ ಪೂರ್ವ ಕಾಲೇಜಿನ ಸರ್ಕಾರಿ ಉರ್ದು ಪ್ರೌಢಶಾಲಾ ವಿಭಾಗದ 1980 81ನೇ ಸಾಲಿನ ಹಳೆಯ ಉರ್ದು ಸಹಪಾಠಿ ವಿದ್ಯಾರ್ಥಿ ಗಳು ಸೇರಿ ಸುಮಾರು ನಲವತ್ತೈದು ವರ್ಷಗಳ ಬಳಿಕ ಕೊಪ್ಪಳದಲ್ಲಿ ಸ್ನೇಹ ಸಮ್ಮಿಲನ ಕಾರ್ಯಕ್ರಮ ಆಯೋಜನೆಗೆ ನಿರ್ಣಯಿಸಿದ್ದಾರೆ,

ನಗರದಲ್ಲಿ ಬುಧವಾರ ಸಂಜೆ ಪೂರ್ವಭಾವಿ ಸಿದ್ದತಾ ಸಭೆ ನಡೆಸಿದ ಹಳೆಯ ಸಹಪಾಠಿ ಉರ್ದು ವಿದ್ಯಾರ್ಥಿಗಳುಸೇರಿಸುದೀರ್ಘವಾಗಿ ಚರ್ಚಿಸಿ ಬರುವ ಜೂನ್ ಕೊನೆಯ ವಾರ ಅಥವಾ ಜುಲೈ ಮೊದಲನೇ ವಾರದಲ್ಲಿ ಎಲ್ಲರ ಅನುಕೂಲಕ್ಕೆ ತಕ್ಕಂತೆ ದಿನ ಮತ್ತು ದಿನಾಂಕ ಹಾಗೂ ಸ್ಥಳ ನಿಗದಿಪಡಿಸಿ ಸ್ನೇಹ ಸಮ್ಮಿಲನ ಕಾರ್ಯಕ್ರಮ ನಡೆಸಲಾಗುವುದು, ಸದರಿ ಕಾರ್ಯಕ್ರಮದಲ್ಲಿ ಎಲ್ಲರು ಅವರ ಕುಟುಂಬ ಪರಿವಾರ ಸಮೇತ ಪಾಲ್ಗೊಳ್ಳುವಂತೆ ವ್ಯವಸ್ತೆ ಮಾಡಲಾಗುವುದು, ಕಾರ್ಯಕ್ರಮ ಅಚ್ಚುಕಟ್ಟಾಗಿ ನಡೆಸಲು ಸಮಿತಿ ಉಪ ಸಮಿತಿಗಳ ರಚನೆ ಮಾಡಿ ಆಯಾ ಸಮಿತಿಗಳಿಗೆ ಜವಾಬ್ದಾರಿ ಹಂಚಿಕೆ ಮಾಡಿಕೊಡಲಾಗುವುದು ಒಟ್ಟಾರೆ ಕಾರ್ಯಕ್ರಮ ಅರ್ಥಪೂರ್ಣವಾಗಿ ಆಚರಿಸಲು ಬುಧವಾರದಂದು ಕೊಪ್ಪಳದಲ್ಲಿ ಜರುಗಿದ ಪೂರ್ವ ಭಾವಿ ಸಿದ್ಧತಾ ಸಭೆಯಲ್ಲಿ ನಿರ್ಧಾರ ಪ್ರಕಟಿಸಲಾಯೀತು, ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆಯನ್ನು ಸಯ್ಯದ್ ಗೌಸ್ ಪಾಷಾ ಖಾಜಿ ವಹಿಸಿದ್ದರು, ಮಹಿಳಾ ಸಹಪಾಠಿ ಪರವಾಗಿ ಸಲ್ಮಾ ಜಹಾ ನೇತೃತ್ವವಹಿಸಿದ್ದರು ಎಂ ಸಾಧಿಕ್ ಅಲಿ ಸಭೆಯ ಕಾರ್ಯಕಲಾಪ ನಡೆಸಿ ಕೊಟ್ಟರು,

ಸದರಿ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಕೊಪ್ಪಳದ ಹಳೆಯ ಉರ್ದು ವಿದ್ಯಾರ್ಥಿ ಸಹಪಾಠಿಗಳಾದ ಸಲೀಮುದ್ದೀನ್,

ಶಮೀಮುನ್ನಿಸಾ ಬೇಗಂ ಖಿಲ್ಲೇದಾರ್ ರುಕ್ಸಾನಾ ಮನಿಯಾರ್ ಬದರ್ ಸುಲ್ತಾನ ಜೀನತ್ ಬೇಗಮ್ ಮತ್ತಿತರರು ಪಾಲ್ಗೊಂಡಿದ್ದರು.



**"UPSC ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಿ 548 ನೇ ಸ್ಥಾನ ಪಡೆದು ಐ ಪಿ ಎಸ್ ಗೆ ಆಯ್ಕೆಯಾದ ಜಿಲ್ಲೆಯ ಮುಧೋಳ ತಾಲ್ಲೂಕಿನ ಅಕ್ಕಿಮರಡಿ ಗ್ರಾಮದ ಸಾಧನೆ ಮಾಡಿದ ಯುವಕ ಪಾಂಡುರಂಗ ಸದಾಶಿವ ಕಂಬಳಿ ಅವರಿಗೆ ಬಾಗಲಕೋಟೆಯ ಶಾಸಕರಾದ ಎಚ್ ವಾಯ್ ಮೇಟಿಯವರು ಸನ್ಮಾನಿಸಿ ಅವರಿಗೆ ಈ ಯಶಸ್ಸು ಇನ್ನು ಹೆಚ್ಚಿನ ಸಾಧನೆಗಳತ್ತ ದಾರಿ ಮಾಡಿಕೊಡಲಿ ಎಂದು ಹಾರೈಸಿದರು.**

**UPSC ಪರೀಕ್ಷೆಯಲ್ಲಿ ಉತ್ತಮ ಅಂಕಗಳೊಂದಿಗೆ ಉತ್ತೀರ್ಣರಾಗುವುದು ಬಹುಮುಖ್ಯ ಸಾಧನೆಯಾಗಿದೆ ? ಇದು ಹಲವಾರು ತಿಂಗಳುಗಳ ಶ್ರಮ, ಸಮರ್ಪಣೆ ಮತ್ತು ಸ್ಥಿರತೆಯ ಫಲ ಎಂದು ಎಚ್ ವಾಯ್ ಮೇಟಿ ಬಣ್ಣಿಸಿದರು. ಜಿಲ್ಲಾ ಪಂಚಾಯಿತಿಯ ಮಾಜಿ ಅಧ್ಯಕ್ಷೆ ಬಾಯಕ್ಕ ಮೇಟಿ ಮುಖಂಡ ನಿಂಗನಗೌಡ ಪಾಟೀಲ ರಂಗನಗೌಡ ಪಾಟೀಲ ಮಲ್ಲಿಕಾರ್ಜುನ ಮೇಟಿ ಮಲ್ಲು ಶಿರೂರ ವೇಮನರೆಡ್ಡಿ ನಗರಸಭೆ ಸದಸ್ಯ ವೀರಣ್ಣ ಶಿರಗಣ್ಣನವರ ರಾಜು ಪಾಟೀಲ ಮುಂತಾದವರಿದ್ದರು.**

# ಕೃಷಿಯಲ್ಲಿ ಸಂಯುಕ್ತ ಗೊಬ್ಬರ ಬಳಸಲು ರೈತರಿಗೆ ಮನವಿ

**ಕೊಪ್ಪಳ :** ಈ ವರ್ಷ ಅವಧಿಗೆ ಮುನ್ನವೇ ಮಳೆ ಪ್ರಾರಂಭವಾಗಿದ್ದು, ಮುಂಗಾರು ಹಂಗಾಮುಉತ್ತಮವಾಗಿಪ್ರಾರಂಭವಾಗಿದೆ. ಇಲ್ಲಿಯವರೆಗೆ ವಾಡಿಕೆ ಮಳೆ ಪ್ರಮಾಣ 75 ಮಿ.ಮೀ. ಆಗಿದ್ದು, ವಾಸ್ತವಿಕ ಮಳೆ 166 ಮಿ.ಮೀ. ಆಗಿದೆ. ಇದು ಸಾಮಾನ್ಯಕ್ಕಿಂತ ಶೇ.120ಹೆಚ್ಚಾಗಿದೆ.ಮುಂಗಾರುಹಂಗಾಮು ಆಶಾದಾಯಕವಾಗಿರುವ ನಿರೀಕ್ಷೆ ಇದೆ.

ರೈತರು ಈಗಾಗಲೇ ಭೂಮಿ ಹದಗೊಳಿಸುವ ಕಾರ್ಯ ಹಾಗೂ ಕೃಷಿ ಬೆಳೆಗಳ ಬಿತ್ತನೆ ಚಟುವಟಿಕೆಗಳಲ್ಲಿ ತೊಡಗಿದ್ದಾರೆ. ಕೃಷಿ ಇಲಾಖೆಯು ಈ ವರ್ಷ 3.19 ಲಕ್ಷ ಹೆಕ್ಟೇರ್ ಬಿತ್ತನೆ ಗುರಿ ಹೊಂದಿದ್ದು, ಜಿಲ್ಲೆಯ ಮುಖ್ಯ ಬೆಳೆಗಳಾಗಿಮೆಕ್ಕೆಜೋಳ,ಭತ್ತ,ಸಜ್ಜೆ,ತೊಗರಿ, ಹೆಸರು, ಸೂರ್ಯಕಾಂತಿ, ಶೇಂಗಾ, ಹತ್ತಿ ಮತ್ತು ಸಿರಿಧಾನ್ಯ ಬೆಳೆಗಳಿಗೆ ಅಗತ್ಯವಿರುವ ಬಿತ್ತನೆ ಬೀಜವನ್ನುರೈತ ಸಂಪರ್ಕ ಕೇಂದ್ರಗಳ ಮೂಲಕ ಈಗಾಗಲೇ ವಿತರಿಸಲಾಗುತ್ತಿದೆ. ಇದುವರೆಗೆ 9,703 ಕ್ವಿಂಟಲ್ ಬೀಜವನ್ನು ದಾಸ್ತಾನಿಕರಿಸಲಾಗಿದ್ದು,

ರೈತರು ಬೀಜ ಪಡೆಯುವಾಗ ಕಡ್ಡಾಯವಾಗಿ ತಮ್ಮ ಫ್ರೂಟ್ ಐಡಿ ಸಂಖ್ಯೆ ನೀಡಬೇಕಾಗಿರುತ್ತದೆ. ಬೀಜ ವಿತರಣೆಯು ಕ್ಯೂಆರ್ ಕೋಡ್ ಸ್ಕ್ಯಾನ್ ಮೂಲಕ ನಡೆಯುತ್ತಿದ್ದು,

ಪ್ರತಿ ಲಾಟ್‌ನ ಬೀಜ ಮಾದರಿಯನ್ನು ಪ್ರಯೋಗಾಲಯಕ್ಕೆ ಕಳುಹಿಸಿ ಗುಣಮಟ್ಟ ಖಾತರಿಪಡಿಸಿ ವಿತರಿಸಲಾಗುತ್ತಿದೆ. ಖಾಸಗಿ ಅಂಗಡಿಗಳಲ್ಲಿ ಬೀಜ ಖರೀದಿ ಮಾಡಿದ ರೈತರು ಕಡ್ಡಾಯವಾಗಿ ಖರೀದಿ ಬಿಲ್ ಪಡೆಯಬೇಕು.

ಜಿಲ್ಲೆಯಲ್ಲಿ ಈ ವರ್ಷ ಮುಂಗಾರು ಹಂಗಾಮಿಗೆ 1.07 ಲಕ್ಷ ಟನ್ ರಸಗೊಬ್ಬರದ ಬೇಡಿಕೆ ಇದ್ದು, ಈವರೆಗೆ 0.47 ಲಕ್ಷ ಟನ್ ದಾಸ್ತಾನಿಕರಣ ಹಾಗೂ 0.14 ಲಕ್ಷ ಟನ್ ವಿತರಣೆ ಮಾಡಲಾಗಿದೆ. ಉಳಿದ 0.33 ಲಕ್ಷ ಟನ್ ರಸಗೊಬ್ಬರ ದಾಸ್ತಾನಿನಲ್ಲಿದೆ. ಪ್ರಸ್ತುತ ಯೂರಿಯಾ 12,692 ಟನ್, ಡಿ.ಎ.ಪಿ 1,619 ಟನ್, ಎಂ.ಒ.ಪಿ 2,099 ಟನ್, ಕಾಂಪ್ಲೆಕ್ಸ್ 15,970 ಟನ್, ಎಸ್.ಎಸ್.ಪಿ 708 ಟನ್ ರಸಗೊಬ್ಬರ ದಾಸ್ತಾನು ಲಭ್ಯವಿದೆ.

ಬಿತ್ತನೆಸಮಯದಲ್ಲಿರೈತರುಹೆಚ್ಚಾಗಿಡಿ.ಎ.ಪಿ ರಸಗೊಬ್ಬರ ಬಳಕೆ ಮಾಡುತ್ತಿದ್ದಾರೆ. ಇದರ ಬದಲಾಗಿ,ನ್ಯಾನೋಡಿ.ಎ.ಪಿ,20:20:0:16, 10:26:26, 19:19:19 ಇತ್ಯಾದಿ ಸಂಯುಕ್ತ ರಸಗೊಬ್ಬರಗಳನ್ನು ಬಳಸಬಹುದಾಗಿದೆ.

ರಸಗೊಬ್ಬರದ ಗುಣಮಟ್ಟವನ್ನು ಖಚಿತಪಡಿಸಿಕೊಳ್ಳುವ ನಿಟ್ಟಿನಲ್ಲಿ, ಕೃಷಿ ಇಲಾಖೆ ಅಧಿಕಾರಿಗಳು ಎಲ್ಲಾ ಕೃಷಿ ಪರಿಕರ ಮಾರಾಟ ಮಳಿಗೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ.

ಜಿಲ್ಲೆಯಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳಿಗೆ ಯಾವುದೇ ಕೊರತೆ ಉಂಟಾಗದಂತೆ ಕ್ರಮ ಕೈಗೊಳ್ಳಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ರೈತರಲ್ಲಿ ಪ್ರಕಟಣೆ ಮೂಲಕ ಮನವಿ ಮಾಡಿದ್ದಾರೆ.

# ವೀರಣ್ಣ ಚರಂತಿಮಠ ಅವರ ಜನ್ಮದಿನಾಚರಣೆ : ಮುಚಖಂಡಿಯಲ್ಲಿ ಕಾರ್ಯಕರ್ತರಿಂದ ವಿಶೇಷ ಪೂಜೆ

# ನೇರ ನುಡಿಯ ಪರಿಶುದ್ಧ ಹಸ್ತದ ಅಭಿವೃದ್ಧಿಯ ಹರಿಕಾರ: ಜಿ.ಎನ್.ಪಾಟೀಲ

**ಬಾಗಲಕೋಟೆ :** ಕಾಯಕಯೋಗಿ ಡಾ.ವೀರಣ್ಣ ಚರಂತಿಮಠ ಅವರು ನೇರ ನುಡಿಯ ಪರಿಶುದ್ಧ ಹಸ್ತದ ಅಭಿವೃದ್ಧಿಯ ಹರಿಕಾರರಾಗಿದ್ದು ಬಾಗಲಕೋಟೆಯ ಬೆಳವಣಿಗೆಯಲ್ಲಿ ಅವರ ಪಾತ್ರ ಬಹು ದೊಡ್ಡದಾಗಿದೆ ಎಂದು ಬಿಟಿಡಿಎ ಮಾಜಿ ಅಧ್ಯಕ್ಷ ಜಿ.ಎನ್.ಪಾಟೀಲ ಹೇಳಿದರು.



ಅವರುಶನಿವಾರಮುಚಖಂಡಿಂ–ಯಲ್ಲಿ ಹಿಂದಿನ ಶಾಸಕರಾದ ಡಾ.ವೀರಣ್ಣ ಚರಂತಿಮಠ ಅವರ ಜನುಮದಿನದ ನಿಮಿತ್ಯ ಶ್ರೀ ವೀರಭದ್ರೇಶ್ವರ ದೇವ–ರಿಗೆ ವಿಶೇಷ ಪೂಜೆಯನ್ನು ನೆರವೇರಿಸಿ ಮಾತನಾಡಿದ ಅವರು ನೇರ ನುಡಿಯ, ಪರಿಶುದ್ಧ ಹಸ್ತದ ವೀರಣ್ಣನವರು ಅಪ್ರತಿಮ ಕನಸುಗಾರರು, ಅವರ ಕಾಲಾವಧಿಯಲ್ಲಿ ಸಂಘವು ಬಾಗಿಲುಕೋಟೆಯನ್ನು ದೇಶದ ವಿದ್ಯಾ ನಕ್ಷೆಯಲ್ಲಿ ಒಂದು ಉಚ್ಚ ಸ್ಥಾನಕ್ಕೆ ಏರಿಸುವುದು ನಿಸ್ಸಂಶಯ,ಅಷ್ಟೇ ಏಕೆ, ಇಂದಿನ ಶೀಕ್ಷಣದ ಜಾಗತೀಕರಣದ ದಿನಮಾನದಲ್ಲಿ ಸಂಗವೂ ಜಾಗತಿಕ ಮಟ್ಟದಲ್ಲಿಯೂ ಗಮನಾರ್ಹವಾದ ಸೇವೆ ಸಲ್ಲಿಸುತ್ತಿದೆ,ಅವರ ಕನಸು, ಪರಿಶುದ್ದತೆ ಹಾಗೂ ಸಾಧಿಸುವ ಛಲ ಇವೆಲ್ಲವೂ ಸುಂದರವಾಗಿ ಸಮ್ಮಿಳಿತವಾಗಿರುವುದು ವೀರಣ್ಣನವರಲ್ಲಿ, ಅವರ ಸರಳ ಜೀವನ,ಅನೇಕ ವಿಷಯಗಳ ಅಧ್ಯಯನ,ಭಾರತೀಯ ಸಂಸ್ಕೃತಿ, ಹಿಂದುತ್ವದ ಪ್ರತಿಪಾದಕರಾಗಿ ವೀರಣ್ಣನವರು ಅನೇಕ ಜನರ ಪ್ರೀತಿ, ಗೌರವ, ಅಭಿಮಾನಕ್ಕೆ ಪಾತ್ರರಾಗಿದ್ದಾರೆ,ಅವರಶಿಸ್ತುಬದ್ಧ, ಸಮಯಪಾಲನೆ,ನಿಷ್ಠುರ ಸಾತ್ವಿಕ ಸ್ವಭಾವ ಎಲ್ಲರಿಗೂ ಆದ–ರ್ಶ, ಅವರ ಅಭಿವೃದ್ಧಿ ಪಥ–ದ ಮಾದರಿ ಬಾಗಲಕೋಟೆ ಎಲ್ಲರೂ ಮೆಚ್ಚುವಂತಹದ್ದು, ಅವರ ನೇತೃತ್ವದಲ್ಲಿ ಇನ್ನು ಹೆಚ್ಚಿನ ಕೆಲಸಗಳು ಆಗಲಿ ಎಂದರು.

ಜಿಲ್ಲಾಪ್ರಧಾನಕಾರ್ಯದರ್ಶಿರಾಜು ನಾಯ್ಕರ ಮಾತನಾಡಿ ಇಂದು ಕಾರ್ಯಕರ್ತರ ನೋವನ್ನು ಅರ್ಥಮಾಡಿಕೊಂಡು ಅವರನ್ನು ಗುರುತಿಸಿ ಅವರಿಗೆ ಅವಕಾಶ ನೀಡಿ ಅವರ ಬೇಳವಣಿಗೆಗೆ ಬೆನ್ನೆಲುಬಾಗಿ ನಿಲ್ಲುವವರು ಡಾ. ವೀರಣ್ಣ ಚರಂತಿಮಠ ಅವರು, ಅವರ ಶಾಸಕರಾಗಿದ್ದ ಕಾಲಾವಧಿಯಲ್ಲಿ ಬಾಗಲಕೋಟೆ ಪಟ್ಟಣ ಗ್ರಾಮಗಳನ್ನು ಸಾಕಷ್ಟು ಅಭಿವೃದ್ಧಿ ಮಾಡಿದ್ದಾರೆ, 150ಕ್ಕೂ ಹೆಚ್ಚು ದೇವಸ್ಥಾನಗಳ ಜೀರ್ಣೋದ್ದಾರ, ಅಂಗನವಾಡಿ ಕೇಂದ್ರಗಳು,ಪ್ರಾಥಮಿಕ ಹಾಗೂ ಪ್ರೌಡಶಾಲೆಗಳು, ಸಮುದಾಯ ಭವನಗಳು,ಪ್ರಾಥಮಿಕ ಆರೋಗ್ಯ ಕೇಂದ್ರಗಳು,ಗ್ರಂಥಾಲಯಗಳು, ಗ್ರಾಮದ ನಗರದ ರಸ್ತೆಗಳು,ಚರಂಡಿಗಳು,ಕೂಡಿಯುವ ನೀರಿನ ಸೌಲಭ್ಯ ಸೇರಿದಂತೆ ನಗರ ಹಾಗೂ ಗ್ರಾಮೀಣಕ್ಕೆ ಬೇಕಾಗುವ ಮೂಲಭೂತ ಕೆಲಸಗಳನ್ನು ಮಾಡಿದ್ದಾರೆ, ಅವರ ಅವಧಿಯ ಕೆಲಸಗಳು ಇಂದು ಕೂಡಾ ನಡೆದಿವೆ,ಅವರಂಥಅಭಿವೃದ್ಧಿಪರ ನಾಯಕ ಸಿಗುವುದು ಅಪರೂಪ, ಅವರ ಕಾರ್ಯಕ್ಷೇತ್ರದಲ್ಲಿ ನಾವೆಲ್ಲ ಜನರ ಸೇವೆ ಮಾಡುತ್ತಿರುವುದು ಹೆಮ್ಮೆಯ ವಿಷಯವಾಗಿದೆ ಎಂದರು.

ಈ ಸಂದರ್ಭದಲ್ಲಿ ಶರಣಪ್ಪ ಗುಳೇದ, ಯಲ್ಲಪ್ಪ ಬೇಂಡಿಗೇರಿ, ಬಸವರಾಜ ಹುನಗುಂದ, ವೀರಣ್ಣ ಹಳೇಗೌಡರ, ಸತ್ಯನಾರಯಣ ಹೇಮಾದ್ರಿ, ರಾಜು ರೇವನಕರ, ಮಹೇಶ ಅಂಗಡಿ, ಜ್ಯೋತಿ ಭಜಂತ್ರಿ, ರೇಖಾ ಕಲಬುರಗಿ, ಶಶಿಕಲಾ ಮಜ್ಜಗಿ, ವಿಜಯಲಕ್ಷ್ಮೀ ಭದ್ರಶೆಟ್ಟಿ, ನಾಗರತ್ನಾ ಹೆಬ್ಬಳ್ಳಿ, ಮುತ್ತು ಸೀಮಿಕೇರಿ, ಶ್ರೀಧರ ನಾಗರಬೇಟ್ಟ,. ಸುರೇಶ ಮಜ್ಜಗಿ, ಶ್ರೀನಾಥ ಸಜ್ಜನ, ಸಂಗಯ್ಯ ಸರಗಣಾಚಾರಿ, ರಾಮಣ್ಣ ಜುಮನಾಳ. ಸಂಗಣ್ಣ ಶಿರೂರ, ಶೋಭಾ ರಾವ್, ಯಲ್ಲಪ್ಪ ನಾರಾಯಣಿ, ಬಸವರಾಜ ಅವರಾದಿ, ಆನಂದ ಕೋಟಗಿ, ಪ್ರಭುಸ್ವಾಮಿ ಸರಗಣಾಚಾ–ರಿ,ಸಂಗಣ್ಣ ಕಲಾದಗಿ, ಸಾಗರ ಬಂಡಿ, ಬಸವರಾಜ ಹೆಬ್ಬಳ್ಳಿ, ಯಲ್ಲಪ್ಪ ಪಾತ್ರೋಟ, ಚಂದ್ರು ರಾಮೋಡಗಿ, ಉಮೇಶ ಹಂಚಿನಾಳ

**ವಿಶೇಷ ಪೂಜೆ :**

**ಹಣ್ಣು ಹಂಪಲ ವಿತರಣೆ:**

ಶ್ರೀ ವೀರಭದ್ರೇಶ್ವರ ದೇವರಿಗೆ ಬೆಳಗಿನ ಜಾವ ಪಂಚಾಮೃತ ಅಭಿಷೇಕ,ರುದ್ರಾಭಿಷೇಕರ,ಮಹಾ ಮೃತ್ಯುಂಜಯ ಮಂತ್ರಜಪ, ಸೇ–ರಿದಂತೆ ವಿಶೇಷ ಪೂಜೆ ಸಲ್ಲಿಸಿ ಹರಿಸಲಾಯಿತು.

ನಂತರದಲ್ಲಿ ವೃದ್ದಾಶ್ರಮಕ್ಕೆ ತೆರಳಿ ಅಲ್ಲಿ ಹಣ್ಣು ಹಂಪಲ ವಿತ–ರಿಸಲಾಯಿತು.

# ವಿಶ್ವ ಮುಟ್ಟಿನ ನೈರ್ಮಲ್ಯ ದಿನ: ಜಾಗೃತಿ ಕಾರ್ಯಕ್ರಮ

**ಕೊಪ್ಪಳ :** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ತಾಲೂಕಾ ಆರೋಗ್ಯಾಧಿಕಾರಿಗಳ ಕಛೇರಿ, ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಮೇ 28 ರಂದು ಕೊಪ್ಪಳ ನಗರದ ದೇವರಾಜ ಅರಸು ಕಾಲೋನಿಯ ಅಂಗನವಾಡಿ ಕೇಂದ್ರದಲ್ಲಿ ವಿಶ್ವ ಮುಟ್ಟಿನ ನೈರ್ಮಲ್ಯ ದಿನದ ಅಂಗವಾಗಿ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶಿವಾನಂದ ವ್ಹಿ.ಪಿ ಇವರು ಮಾತನಾಡಿ, ಪ್ರತಿ ವರ್ಷ ಮೇ–28 ರಂದು ವಿಶ್ವ ಮುಟ್ಟಿನ ನೈರ್ಮಲ್ಯ ದಿನ ಜಾಗೃತಿ ಕಾರ್ಯಕ್ರಮವನ್ನು ಆಚರಿಸಲಾಗುತ್ತದೆ. ಇದರ ಉದ್ದೇಶ ಋತುಚಕ್ರ ನೈರ್ಮಲ್ಯದ (ಸ್ವಚ್ಛತೆ) ಬಗ್ಗೆ ಪ್ರತಿಯೊಬ್ಬರಿಗೂ ಅರಿವು ಮೂಡಿಸುವುದಾಗಿದೆ. ಮುಟ್ಟು ಇದೊಂದು ದೇವರು ಕೊಟ್ಟಂತಹ ನಿಸರ್ಗದ ಕೊಡುಗೆಯಾಗಿದೆ. ಪ್ರತಿ ಹೆಣ್ಣು ಮಕ್ಕಳು ಸಂಭ್ರಮ ಪಡುವಂತಹ ವಿಷಯವಾಗಿದೆ. ಪ್ರತಿ ತಿಂಗಳು 28–30 ದಿನಗಳಿಗೊಮ್ಮೆ ಮುಟ್ಟಾಗುವುದು ಸಹಜ. ಇದು ಯಾವುದೇ ಶಾಪವಲ್ಲ. ದೇವರು ನೀಡಿದ ವರದಾನವಾಗಿದೆ. ಈ ಸಮಯದಲ್ಲಿ ಕೆಲವು ಹೆಣ್ಣು ಮಕ್ಕಳು ದೇವರ ಕೋಣೆಗೆ ಹೋಗುವುದು ನಿಷೇಧ, ಸಭೆ ಸಮಾರಂಭಗಳಲ್ಲಿ ಭಾಗವಹಿಸದಿರುವುದು, ಒಂದು ಕಡೆ ಕುಳಿತುಕೊಳ್ಳುವುದು, ಇನ್ನಿತರ ಮೂಢನಂಬಿಕೆಯಿಂದ ಬಳಲುತ್ತಾರೆ. ಇಂತಹ ಮೂಢನಂಬಿಕೆಗಳನ್ನು ಬಿಟ್ಟು ಹೊರಬಂದು ಸಹಜ ಪ್ರಕ್ರಿಯೆಂದು ತಿಳಿದುಕೊಳ್ಳಬೇಕು. ಮುಟ್ಟು ಸಹಜ ಪ್ರಕ್ರಿಯೆ, ಕಳಂಕವಲ್ಲ. ಮುಟ್ಟಿನ ಸಮಯದಲ್ಲಿ ಸ್ವಚ್ಛತೆ ಕಾಪಾಡುವುದು ಅತೀ ಮುಖ್ಯವಾಗಿದೆ. ಮುಟ್ಟಿನ ಸಮಯದಲ್ಲಿ ದಿನ–ನಿತ್ಯ ಸ್ನಾನ ಮಾಡಬೇಕು, ಸ್ಯಾನಿಟರಿ ಪ್ಯಾಡ್/ಸ್ವಚ್ಛವಾದ ಬಟ್ಟೆಯನ್ನು ಉಪಯೋಗಿಸಬೇಕು. ಬಟ್ಟೆಗಳನ್ನು ಸಾಬೂನಿಂದ ತೊಳೆದುಬಿಸಿಲಿನಲ್ಲಿಒಣಗಿಸಬೇಕು.ಉಪಯೋಗಿಸಿದ ಸ್ಯಾನಿಟರಿ ಪ್ಯಾಡ್/ ಬಟ್ಟೆಗಳನ್ನು ಸೂಕ್ತವಾಗಿ ವಿಲೇವಾರಿ ಮಾಡಬೇಕು. ಈ ಸಮಯದಲ್ಲಿ ಪೌಷ್ಠಿಕ ಆಹಾರವನ್ನು ಸೇವಿಸಬೇಕು ಅದರಲ್ಲೂ ವಿಶೇಷವಾಗಿ ಕಬ್ಬಿಣಾಂಶ, ಕ್ಯಾಲ್ಸಿಯಂ ಇರುವ ಸೊಪ್ಪು ತರಕಾ–ರಿಗಳನ್ನು ಉಪಯೋಗಿಸಬೇಕು ಎಂದು ತಿಳಿಸಿದರು.

ಕೊಪ್ಪಳ ತಾಲೂಕಾ ಶಿಶು ಅಭಿವೃದ್ಧಿ ಯೋಜನಾಧಿಕಾ–ರಿಗಳಾದ ರೋಹಿಣಿ ಕೊಟಗಾರ ಮಾತನಾಡಿ, ಮುಟ್ಟು ಮಹಿಳೆಯರಲ್ಲಿ ಒಂದು ನೈಸರ್ಗಿಕ ಪ್ರಕ್ರಿಯೆ. ಯುವತಿಯರಲ್ಲಿ ಮೊದಲನೇ ಮುಟ್ಟು 11 ರಿಂದ 16 ವರ್ಷದೊಳಗೆ ಯಾವಾಗಲಾದರೂ ಪ್ರಾರಂಭವಾಗಬಹುದು. ಮುಂದೆ 45–50ನೇ ವರ್ಷಕ್ಕೆ ಮುಟ್ಟು ನಿಲ್ಲುತ್ತದೆ. ಈ ಮದ್ಯದ ಅವಧಿಯಲ್ಲಿ ಮುಟ್ಟಿನ ಸ್ವಚ್ಛತೆ ಬಗ್ಗೆ ಮುಂಜಾಗ್ರತೆ ಕ್ರಮಗಳನ್ನು ತೆಗೆದುಕೊಂಡು ತಮ್ಮ ಆರೋಗ್ಯದ ಕಡೆ ಗಮನ ಹರಿಸುವಂತೆ ಮಾಹಿತಿ ನೀಡಲು ಅಂಗನವಾಡಿ ಕಾರ್ಯಕರ್ತೆಯರಿಗೆ ಮತ್ತು ಮೇಲ್ವಿಚಾರಕರಿಗೆ ತಿಳಿಸಿದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗಂಗಮ್ಮ ಕೆ. ಮಾತನಾಡಿ, ಹೆಣ್ಣುಮಕ್ಕಳು ಮುಟ್ಟಿನ ಸಮಯದಲ್ಲಿ ಅನುಭವಿಸುವ ತೊಂದರೆ ಮತ್ತು ಪರಿಹಾರ ಕ್ರಮಗಳು, ಜನನಾಂಗ ಮಾರ್ಗದ ಸೋಂಕು ಹಾಗೂ ಲೈಂಗಿಕ ಸಂಪರ್ಕದ ಸೋಂಕುಗಳು ಬರದಂತೆ ಮುಂಜಾಗ್ರತೆ ವಹಿಸಬೇಕು. ಈ ಸಮಯದಲ್ಲಿ ಪೌಷ್ಠಿಕ ಆಹಾರ ಸೇವಿಸಬೇಕು. ಶಾರೀರಿಕ ಕಾಯಿಲೆಗಳು ಇದ್ದಲ್ಲಿ ಸೂಕ್ತ ಚಿಕಿತ್ಸೆ ಪಡೆಯಬೇಕು. ಬಿಸಿ ನೀರಿನಿಂದ ಸ್ನಾನ ಮಾಡಬೇಕು. ತಡೆಯಲಾರದ ನೋವು ಇದ್ದಲ್ಲಿ ವೈದ್ಯರನ್ನು ಸಂಪರ್ಕಿಸಬೇಕು. ಪ್ರತಿ 2 ವರ್ಷಕೊಮ್ಮೆ ಗರ್ಭಕಂಠದ ಕ್ಯಾನ್ಸರ್ ಬರದಂತೆ ಪರೀಕ್ಷೆ ಮಾಡಿಸಿಕೊಳ್ಳಬೇಕು ಎಂದು ಫ್ಲಿಪ್ ಚಾರ್ಟ್ ಪುಸ್ತಕ ಬಳಸುವುದರ ಮೂಲಕ ವಿವರಿಸಿದರು.

ಕಾರ್ಯಕ್ರಮದಲ್ಲಿ ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ಶಿವಶರಣಪ್ಪ, ರೂಪಾ, ಮೇಲ್ವಿಚಾರಕರಾದ ಜಯಶ್ರೀ, ಬಸಮ್ಮ, ಆಶಾ/ಅಂಗನವಾಡಿ ಕಾರ್ಯಕರ್ತೆಯರು, ಗರ್ಭಿಣಿಯರು, ತಾಯಂದಿರು, ಕಿಶೋರಿಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಮಕ್ಕಳಿಗಾಗಿ ತೋಟ ಶಾಲೆ: "ನೋಡಿ ಕಲಿ, ಮಾಡಿ ತಿಳಿ"

**ಬಾಗಲಕೋಟ :** ತೋಟಗಾರಿಕೆ ವಿಜ್ಞಾನಿಗಳ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶನಾಲಯದ ಆವರಣದಲ್ಲಿ ಆಯೋಜಿಸಲಾಗಿದ್ದ ಐದು ದಿನಗಳ ಮಕ್ಕಳ ತೋಟಗಾರಿಕೆ ಬೇಸಿಗೆ ಶಿಬಿರವು ಯಶಸ್ವಿಯಾಗಿ ಪೂರ್ಣಗೊಂಡಿತು. "ತೋಟ ಶಾಲೆ ? ನೋಡಿ ಕಲಿ, ಮಾಡಿ ತಿಳಿ" ಎಂಬ ಘೋಷವಾಕ್ಯದಡಿಯಲ್ಲಿ ನಡೆದ ಈ ಶಿಬಿರದಲ್ಲಿ 6 ರಿಂದ 14 ವರ್ಷದ 30ಕ್ಕೂ ಹೆಚ್ಚು ಮಕ್ಕಳು ಉತ್ಸಾಹದಿಂದ ಪಾಲ್ಗೊಂಡರು.




ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ವಿಸ್ತರಣಾ ನಿರ್ದೇಶಕರಾದ ಡಾ. ವೆಂಕಟೇಶಲು, "ಮಕ್ಕಳ ವ್ಯಕ್ತಿತ್ವ ವಿಕಸನಕ್ಕೆ ಇಂತಹ ಶಿಬಿರಗಳು ಉತ್ತಮ ವೇದಿಕೆಯಾಗುತ್ತವೆ. ರಜೆಯ ಸಮಯದಲ್ಲಿ ಮಕ್ಕಳಿಗೆ ತೋಟಗಾರಿಕೆ ಜ್ಞಾನವನ್ನು ಕ್ರಿಯಾತ್ಮಕವಾಗಿ ಅರ್ಥಮಾಡಿಕೊಳ್ಳಲು ಇದು ಉತ್ತಮ ಅವಕಾಶ" ಎಂದು ಹೇಳಿದರು.

ಈ ಶಿಬಿರದಲ್ಲಿ ಮಕ್ಕಳಿಗೆ ಮಣ್ಣು ಮತ್ತು ನರ್ಸರಿಯ ಪ್ರಾಮುಖ್ಯತೆ, ಮೈಕ್ರೋಗ್ರೀನ್ಸ್ ಬೆಳೆಸುವ ವಿಧಾನ, ಬೀಜ ಬಿತ್ತನೆ, ಕೈತೋಟ ನಿರ್ಮಾಣ, ಎರೆಹುಳುವಿನ ಗೊಬ್ಬರ ತಯಾರಿಕೆ, ಸಾವಯವ ಕೃಷಿ, ಜೈವಿಕ ಕೀಟನಾಶಕ ತಯಾರಿಕೆ, ಲಂಬ ಉದ್ಯಾನ ಹಾಗೂ ತಾರಸಿ ತೋಟ ನಿರ್ಮಾಣ, ಹೂ ಹಾಗೂ ಅಲಂಕಾರಿಕ ಸಸ್ಯಗಳ ಬೆಳವಣಿಗೆ, ಕಸಿ, ಬಡ್ಡಿಂಗ್, ಲೇಯರಿಂಗ್, ಹೂದಾನಿ ಹಾಗೂ ಹೂ ಗುಚ್ಛ ತಯಾರಿಕೆ ಮುಂತಾದ ವಿಷಯಗಳಲ್ಲಿ ಪ್ರಾಯೋಗಿಕ ತರಬೇತಿ ನೀಡಲಾಯಿತು.

ಶಿಬಿರದ ಸಂಪನ್ಮೂಲ ವ್ಯಕ್ತಿಗಳಾಗಿ ಡಾ. ಬಾಪುರಾಯಗೌಡ ಪಾಟೀಲ, ಡಾ. ಸಂಜೀವರೆಡ್ಡಿ ಜಿ. ರಡ್ಡಿ, ಡಾ. ರಾಮನಗೌಡ ಹಡಗಲಿ, ಡಾ. ಹಾದಿಮನಿ, ಡಾ. ಬಸವರಾಜಪ್ಪ ಹೆಚ್.ಆರ್. ಮತ್ತು ಡಾ. ಭುವನೇಶ್ವರಿ ಜಿ. ಅವರು ಭಾಗವಹಿಸಿ ಮಕ್ಕಳಿಗೆ ವೈವಿಧ್ಯಮಯ ವಿಷಯಗಳ ಕುರಿತು ತಿಳಿಸಿದರು.

ಶಿಬಿರದ ಸಮಾರೋಪ ಸಮಾರಂಭದಲ್ಲಿ ತೋಟಗಾರಿಕೆ ಮಹಾವಿದ್ಯಾಲಯದ ಡೀನರಾದ ಡಾ. ಬಾಲಾಜಿ ಎಸ್. ಕುಲಕರ್ಣಿ ಅಧ್ಯಕ್ಷತೆ ವಹಿಸಿದರು. ಶಿಬಿರದ ಸಂಂ–ಯೋಜಕರಾದ ಡಾ. ದೀಪಾ ತೇರದಾಳ ಅವರು ಕಾರ್ಯಕ್ರಮ ನಿರೂಪಿಸಿ, ಶಿಬಿರದ ಯಶಸ್ಸಿಗೆ ಸಹಕಾರ ನೀಡಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದರು.



**ರಾಜೀವ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯ ಘಟಕದ ವಿಶೇಷಾಧಿಕಾರಿಯಾಗಿ ಡಾ. ಬಿ.ಎಚ್.ನಾರಾಯಣಿಯವರನ್ನು ಸರ್ಕಾರ ನೇಮಕ ಮಾಡಿದ ಹಿನ್ನೆಲೆಯಲ್ಲಿ ಇಂದು ಬಾಗಲಕೋಟ ಜಿಲ್ಲಾ ಛಲವಾದಿ ಮಹಾಸಭಾದಿಂದ ಅವರನ್ನು ಸನ್ಮಾನಿಸಲಾಯಿತು. ಚಿತ್ರದಲ್ಲಿ ಮಹಾಸಭಾ ಜಿಲ್ಲಾಧ್ಯಕ್ಷ ವಿವೇಕಾನಂದ ವಿ.ಗರಸಂಗಿ, ಶ್ರೀಧರ ಚಿಕ್ಕಲಕಿ, ಸುಭಾಷ್ಚಂದ್ರ ಬದಾಮಿ, ಜಯವಂತ ಗುದಿಗೆನ್ನವರ, ಡಿ.ಎಸ್.ಜೈಭೀಮ, ಜೈಶಂಕರ ಕಾಂಬಳೆ, ತಿಪ್ಪಣ್ಣ ಚಲವಾದಿ, ಶನಶಪ್ಪ ಬಂಡಿ ಸೇರಿದಂತೆ ಇತರರು ಹಾಜರಿದ್ದರು.**

# ಮಾಧ್ಯಮ ಕ್ಷೇತ್ರವಿಲ್ಲದೇ ಜೀವನ ಸಾಧ್ಯವಿಲ್ಲ: ಡಾ. ಬಿ.ಕೆ. ರವಿ



**ಜಮಖಂಡಿ :** ವಿಶ್ವದಲ್ಲಿ ಮಾಧ್ಯಮ ಕ್ಷೇತ್ರವಿಲ್ಲದೇ ಜೀವನ ನಡೆಸಲು ಸಾಧ್ಯವಿಲ್ಲ. ವಿಶ್ವದಲ್ಲಿ ಭಾರತದ ಮಾಧ್ಯಮ ಕ್ಷೇತ್ರ ಮುಂಚೂಣಿಯಲ್ಲಿದೆ. ಮಾಧ್ಯಮ ಎಂದರೆ ಸುದ್ದಿ,ಶಿಕ್ಷಣ,ಮನರಂಜನೆಗಳಿಂದ ಕೂಡಿದೆ ಎಂದು ಕೊಪ್ಪಳದ ವಿಶ್ವ ವಿದ್ಯಾಲಯದ ಕುಲಪತಿ ಡಾ. ಬಿ. ಕೆ. ರವಿ ಹೇಳಿದರು.

ನಗರದ ಬಾಗಲಕೋಟ ವಿಶ್ವವಿದ್ಯಾಲಯದ ಸಭಾಭವನದಲ್ಲಿ ಶುಕ್ರವಾರ ಪ್ರಸಾರಾಂಗ ವಿಭಾಗದಲ್ಲಿ ಹಮ್ಮಿಕೊಂಡಿದ್ದ 'ಸಮಾಜ ಮತ್ತು ಮಾಧ್ಯಮಗಳು' ಕುರಿತು ಒಂದು ದಿನದ ವಿಚಾರ ಸಂಕಿರಣದ ದಿಕ್ಸೂಚಿ ಭಾಷಣದಲ್ಲಿ ಅವರು ಮಾತನಾಡಿದರು.

ವಿಶ್ವದಲ್ಲಿ ಮಾಧ್ಯಮ ಕ್ಷೇತ್ರದಲ್ಲಿ ಭಾರತದೇಶ ಶ್ರೇಷ್ಠ ಸ್ಥಾನದಲ್ಲಿದ್ದು,

ನಮ್ಮ ದೇಶದಲ್ಲಿ ಎರಡು ಸಾವಿರಕ್ಕೂ ಹೆಚ್ಚು ಸುದ್ದಿ ಸಂಸ್ಥೆಗಳಿವೆ. ಆದರೇ ಯಾವುದೇ ಒಂದು ದೇಶದಲ್ಲಿ ಇನ್ನೂರಕ್ಕೂ ಹೆಚ್ಚು ಸುದ್ದಿ ಸಂಸ್ಥೆಗಳಿಲ್ಲ. ಮಾಧ್ಯಮ ಕ್ಷೇತ್ರದಲ್ಲಿ ಸಂವಹನಕಾರಿ ವರದಿಗಳನ್ನು ಮಾಡುವವನೇವರದಿಗಾರ.ಸಂವಹನಕಾರಿ ವರದಿಗಳನ್ನುಸಮುದಾಯ ಗೌರವಿಸುತ್ತದೆ. ಮಾಧ್ಯಮದಲ್ಲಿ ಬಹಳಷ್ಟು ಶಕ್ತಿ ಅಡಗಿದ್ದು ಅದೊಂದು ಸಾಮಾಜಿಕ ಸೇವೆಯಾಗಿದೆ. ಆದರೆ ಖಾಸಗಿ ಮಾಧ್ಯಮ ಕ್ಷೇತ್ರಗಳ ವಿಷಯ ಬೇರೆಯಾಗಿದೆ. ವಾಣಿಜ್ಯೀಕರಣದ ಭರಾಟೆಯಲ್ಲಿ ಮಾಧ್ಯಮ ಕ್ಷೇತ್ರ ಸಿಲುಕಿದೆ. ಮಾಧ್ಯಮ ಕ್ಷೇತ್ರದ ಮೂಲಕ ಜಾಗತಿಕ ಮಟ್ಟದಲ್ಲಿ ಭಾರತ ದೇಶದ ಚಲನಚಿತ್ರ ಶಕ್ತಿಯಾಗಿ ಬೆಳೆಯುತ್ತಿದೆ ಎಂದರು.

ಮಾಧ್ಯಮಕ್ಷೇತ್ರದಲ್ಲಿಸೇವೆಸಲ್ಲಿಸುತ್ತಿರುವವರಿಗೆ ಸಮಯ ನಿಗದಿಯಾಗಿರುವದಿಲ್ಲ. ಸಾಮಾಜಿಕ ಹೊಣೆಗಾರಿಕೆಯನ್ನು ಅರ್ಥೈಸಿಕೊಳ್ಳುವ ಮೂಲಕ ನಂಬಿಕೆ ಉಳಿಸಿಕೊಳ್ಳಬೇಕು. ಇಂದು ಮಾಧ್ಯಮ ಕ್ಷೇತ್ರವೂ ಕೂಡ ಒತ್ತಡದಲ್ಲಿದೆ. ಸಾಮಾಜಿಕ ಹೊಣೆಗಾರಿಕೆ ಮತ್ತು ಜವಾಬ್ದಾರಿಗಳನ್ನು ಮರೆತು ಯಾರೂ ಮಾಧ್ಯಮ ಕ್ಷೇತ್ರದಲ್ಲಿ ಕೆಲಸ ಮಾಡಬಾರದು. ಆರೋಗ್ಯಕರ ಸಮಾಜ ನಿರ್ಮಾಣದಲ್ಲಿ ಮಾಧ್ಯಮದ ಪಾತ್ರ ಅಡಗಿದೆ. ಇಂದಿನ ವರದಿಗಾರರು ಕೇವಲ ತಂತ್ರಜ್ಞಾನ ಬಳಕೆ ಮಾಡಿಕೊಂಡು ಮುಂದೆ ಸಾಗಬಾರದು. ವರದಿ, ಲೇಖನ ಬರೆಯುವ ಹವ್ಯಾಸ ಇದ್ದರೆ ಅವನು ಸಮಾಜದಲ್ಲಿ ಗುರುತಿಸಿಕೊಳ್ಳಲು ಸಾಧ್ಯ ಎಂದರು. ಅಧ್ಯಕ್ಷತೆ ವಹಿಸಿದ್ದ ಬಾಗಲಕೋಟ ವಿಶ್ವವಿದ್ಯಾಲಯ ಕುಲಪತಿ ಪ್ರೊ. ಆನಂದ ದೇಶಪಾಂಡೆ ಮಾತನಾಡಿ, ಪತ್ರಿಕೆ ಮತ್ತು ದೃಶ್ಯ ಮಾಧ್ಯಮದಲ್ಲಿ ಪಾರದರ್ಶಕ ವರದಿ ಗುಣಾತ್ಮಕ ಶಬ್ದಗಳ ಬಳಕೆಯಾಗಬೇಕು. ಎಚ್ಚರಿಸುವ ಮತ್ತು ಅಂಕು ಡೊಂಕು ಸರಿಪಡಿಸಿಕೊಳ್ಳುವಂತಹ ವರದಿಗಳು ಹೆಚ್ಚಾಗಿ ಪ್ರಕಟಗೊಳ್ಳಬೇಕು ಎಂದರು.

ಪ್ರಥಮ ಗೋಷ್ಠಿಯಲ್ಲಿ ತುಮಕೂರಿನ ಸಿದ್ಧಾರ್ಥ ಮಾಧ್ಯಮ ಅಧ್ಯಯನ ಕೇಂದ್ರ ನಿದೇ9ಶಕ ಡಾ. ಬಿ. ಡಿ. ಮುದ್ದೇಶ ಅವರು ನವ ಮಾಧ್ಯಮಗಳು ಮತ್ತು ಸಾಮಾಜಿಕ ಜಾಲತಾಣಗಳು ಹಾಗೂ ಮೈಸೂರಿನ ಮಾಧ್ಯಮ ವಿಶ್ಲೇಷಕರಾದ ಡಾ. ಅಮ್ಮಸಂದ್ರ ಸುರೇಶ ಕೃಷಿ ಮತ್ತು ಅಭಿವೃದ್ಧಿ ಪತ್ರಿಕೋದ್ಯಮ ಕುರಿತು ಮಾತನಾಡಿದರು. ದ್ವಿತೀಯ ಗೋಷ್ಠಿಯಲ್ಲಿ ಬಳ್ಳಾರಿಯ ಹಿರಿಯ ಪತ್ರಕರ್ತ ಪ್ರೊ. ಸಿ. ಮುಂಜುನಾಥ ಸಾಹಿತ್ಯ ಮತ್ತು ಮಾಧ್ಯಮ ಕ್ಷೇತ್ರ ಕುರಿತು ಮಾತನಾಡಿದರು. ಸಮಾರೋಪ ಸಮಾರಂಭದಲ್ಲಿ ಬೆಂಗಳೂರು ವಿಶ್ವ ವಿದ್ಯಾಲಯದ ನಿವೃತ್ತ ಪ್ರೊ. ಎನ್. ನರಸಿಂಹಮೂರ್ತಿ ಸಹಿತ ಬಾಗಲಕೋಟ, ಮುಧೋಳ, ಮಹಾಲಿಂಗಪೂರ ಕಾಲೇಜಿನ ಪತ್ರಿಕೋದ್ಯಮ ವಿಭಾಗದ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಓಲೇಮಠದ ಆನಂದದೇವರು ಸಾನಿಧ್ಯ ವಹಿಸಿದ್ದರು. ವೇದಿಕೆಯಲ್ಲಿ ಮಾಜಿ ಶಾಸಕ ಆನಂದ ನ್ಯಾಮಗೌಡ, ಡಾ. ಆರ್. ನಾಗರಾಜ, ಕುಲಸಚಿವ ಪ್ರೊ. ದಯಾನಂದ ಸಾವಕಾರ, ಡಾ. ಮಲ್ಲಿಕಾರ್ಜುನ ಮರಡಿ, ನಿರ್ದೇಶಕ ಚಿದಾನಂದ ಧವಳೇಶ್ವರ ಸಹಿತ ಇನ್ನೂ ಹಲವರು ಪಾಲ್ಗೊಂಡಿದ್ದರು.

# ಶಿಕ್ಷಕರು ಶಿಕ್ಷಣ, ಪಾಲಕರು ಸಂಸ್ಕಾರ ನೀಡಬೇಕು: ಶಾಸಕ ಗುಡಗುಂಟಿ




**ಜಮಖಂಡಿ :** ಸರ್ಕಾರ ಶಿಕ್ಷಣಕ್ಕೆ ಬಹಳಷ್ಟು ಪ್ರಾಮುಖ್ಯತೆ ನೀಡಿದೆ. ಬಿಸಿಯೂಟ, ಉಚಿತ ಪಠ್ಯ ಪುಸ್ತಕಗಳ ವಿತರಣೆ, ಉಚಿತ ಶಿಕ್ಷಣ ನೀಡಲಾಗುತ್ತಿದ್ದು ಸರ್ಕಾರದ ಸೌಲಭ್ಯಗಳನ್ನು ಎಲ್ಲರೂ ಸದುಪಯೋಗ ಪಡಿಸಿಕೊಳ್ಳಬೇಕು. ಮಕ್ಕಳಿಗೆ ಶಿಕ್ಷಕರು ಶಿಕ್ಷಣ ನೀಡಿದರೆ ಪಾಲಕರು ಸಂಸ್ಕಾರ ನೀಡಬೇಕೆಂದು ಶಾಸಕ ಜಗದೀಶ ಗುಡಗುಂಟಿ ಹೇಳಿದರು.

ನಗರದ ಗಿರೀಶ ನಗರದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಶುಕ್ರವಾರ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರದಿಂದ ಮಕ್ಕಳಿಗೆ ಅನೇಕ ಸವಲತ್ತುಗಳನ್ನು ನೀಡಿ ವಿದ್ಯೆ ಪಡೆಯಲು ಅನುಕೂಲ ಮಾಡಿ ಕೊಡಲಾಗಿದೆ. ಪಾಲಕರು ಮಕ್ಕಳಿಗೆ ಶಾಲೆಗೆ ಕಳುಹಿಸಿ ಸುಮ್ಮನಿರದೆ ಅವರಿಗೆ ಮನೆಯಲ್ಲಿ ಉತ್ತಮ ಸಂಸ್ಕಾರ ನೀಡಬೇಕು ಎಂದರು.

ಎಲ್ಲರೂ ಶಿಕ್ಷಣ ಪಡೆದು ವಿದ್ಯಾವಂತರಾಗಿ ದೇಶದ ಸೇವೆ ಮಾಡಬೇಕು. ವಿದ್ಯಾದಾನ ಎಲ್ಲ ದಾನಕ್ಕಿಂತಲೂ ಶ್ರೇಷ್ಠ. ಈಗಿರುವ ತಂತ್ರಜ್ಞಾನ ಮತ್ತು ಹೊಸ ಶಿಕ್ಷಣ ಪದ್ಧತಿಯನ್ನು ಅಳವಡಿಸಿಕೊಳ್ಳಬೇಕು. ಸರ್ಕಾರಿ ಶಾಲೆಗಳಲ್ಲಿ ಎಲ್ಲಾ ರೀತಿ ತರಬೇತಿ ದೊರೆಯುವಂತೆ ಆಗಬೇಕೆಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎ. ಕೆ. ಬಸಣ್ಣವರ ಮಾತನಾಡಿ, ಶಾಲೆ ಪ್ರಾರಂಭದ ದಿನದಂದೇ ಮಕ್ಕಳಿಗೆ ಪಠ್ಯ ಪುಸ್ತಕಗಳನ್ನು ನೀಡಲು ಸರ್ಕಾರ ವ್ಯವಸ್ಥೆ ಮಾಡಿದೆ. ತಾಲೂಕಿನ ಒಟ್ಟು 583 ಶಾಲೆಗಳ ಪೈಕಿ 312 ಸರ್ಕಾರಿ ಶಾಲೆಗಳಿದ್ದು ಶೇ. 75 ರಷ್ಟು ವಿದ್ಯಾರ್ಥಿಗಳು ಸರ್ಕಾರಿ ಶಾಲೆಗಳಲ್ಲಿ ಓದುತ್ತಿದ್ದಾರೆ.

10ಸಾವಿರ ವಿದ್ಯಾರ್ಥಿಗಳಲ್ಲಿ 108 ವಿದ್ಯಾರ್ಥಿಗಳು ಎನ್.ಎಂ.ಎಂ.ಎಸ್. ಪರೀಕ್ಷೆಯಲ್ಲಿ ತೇರ್ಗಡೆಯಾಗಿದ್ದು ವರ್ಷಕ್ಕೆ 48 ಸಾವಿರ ಶಿಷ್ಯ ವೇತನ ಪಡೆಯುತ್ತಾರೆ. ಹತ್ತನೇ ತರಗತಿ ಪರೀಕ್ಷೆಗಳಲ್ಲಿ 600 ಕ್ಕಿಂತ ಹೆಚ್ಚು ಅಂಕಗಳನ್ನು 210 ವಿದ್ಯಾರ್ಥಿಗಳು ಪಡೆದಿದ್ದಾರೆ. ನಾಲ್ಕು ಜನ ವಿದ್ಯಾರ್ಥಿಗಳು 624 ಅಂಕಗಳನ್ನು ಪಡೆದು ರಾಜ್ಯಕ್ಕೆ ಎರಡನೇ ಸ್ಥಾನ ಪಡೆದಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಾದ ಸೌಮ್ಯಾ ಅರಕೇರಿ, ಪ್ರಗತಿ ಹವಾರಿ, ಸುಭಾನಲ್ಲಾ ಆಸಂಗಿ, ಗಾಜಿಯಾ ಚೌಧರಿ ಅವರನ್ನು ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ಎಸ್ಡಿಎಂಸಿ ಅಧ್ಯಕ್ಷ ವೆಂಕಟೇಶ ಕಮ್ಮಾರ, ಬಿಆರ್‌ಸಿಓ ಕಾಡೇಶ ಕೋಲುರ, ಎಲ್. ಎ. ಮೀಸಿ, ನಾಗಪ್ಪ ಸನದಿ, ವೀರಣ್ಣ ಹಿರೇಮಠ, ಸಿ. ಎಸ್. ಕಲ್ಯಾಣಿ, ಆರ್. ಜಿ. ಮಾಳವದೆ, ಸಿ. ಜಿ. ಕಡಕೋಳ, ಬಿ. ಪಿ. ರತ್ನಾಕರ, ಪ್ರಶಾಂತ ಹಿರೇಮಠ, ನಂದೇಶ ಪಂಚಾಕ್ಷರಿ, ನರಸಿಂಹ ಕಲ್ಲೊಳ್ಳಿ, ಶೋಭಾ ಸಾಳುಂಕೆ, ವಿನೋದ ಮಾಸರಡ್ಡಿ, ಅಶೋಕ ಹಳೆಮನಿ, ಎಲ್. ಬಿ. ಸೌಂದತ್ತಿ, ಬಿ. ಎಂ. ಕುರುವಿನಶೆಟ್ಟಿ ಉಪಸ್ಥಿತರಿದ್ದರು.

# ತಾಲ್ಲೂಕಿನಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಕೂಡಲೇ ಪ್ರಾರಂಭಿಸಿ



**ರಬಕವಿ-ಬನಹಟ್ಟಿ :** ತಾಲ್ಲೂಕಿನಲ್ಲಿ ಆದಷ್ಟು ಬೇಗನೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯವನ್ನು ಪ್ರಾರಂಭಿಸಬೇಕು ಎಂದು ರಬಕವಿಯ ಸರ್ಕಾರಿ ನೌಕರರ ಸಹಕಾರ ಸಂಘದ ಅಧ್ಯಕ್ಷ ಬಿ. ಡಿ. ನೇಮಗೌಡ ಆಗ್ರಹಿಸಿ ಶುಕ್ರವಾರ ಬನಹಟ್ಟಿಯ ಕೆ. ಎಚ್. ಡಿ. ಸಿ. ಕಾಲೋನಿಯ ಶಾಲೆಯಲ್ಲಿ ನಡೆದ ಸಮಾರಂಭದಲ್ಲಿ ಶಾಸಕ ಸಿದ್ದು ಸವದಿಯವರಿಗೆ ಮನವಿ ಸಲ್ಲಿಸಿದರು.

ಸಂಘದಅಧ್ಯಕ್ಷಬಿ.ಡಿ.ನೇಮಗೌಡಮಾತನಾಡಿ,ನೂತನವಾಗಿ ನಿರ್ಮಾಣವಾದ ರಬಕವಿ ಬನಹಟ್ಟಿ ತಾಲ್ಲೂಕಿನಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಇಲ್ಲದೆ ಇರುವುದರಿಂದ ಎಲ್ಲರಿಗೂ ಸಮಸ್ಯೆಯಾಗಿದೆ.

ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಸ್ಥಾಪನೆಯಾಗದೆ ಇರುವುದರಿಂದ ತಾಲ್ಲೂಕಿನ ಆಡಳಿತಾತ್ಮಕ ಕೆಲಸ ಕಾರ್ಯಗಳಿಗೆ,ವಿದ್ಯಾರ್ಥಿಗಳು ತಮ್ಮ ಶಾಲಾ ದಾಖಲಾತಿಗಳ ಮೇಲೆ, ಸ್ಟಡಿ ಸಟಿ9ಫಿಕೇಟ ಮೇಲೆ ಶಿಕ್ಷಣಾಧಿಕಾರಿಗಳ ಸಹಿಯನ್ನು ಪಡೆದುಕೊಳ್ಳಲು ದೂರದ ಜಮಖಂಡಿ ನಗರಕ್ಕೆ ಪರದಾಡುವ ಪರಿಸ್ಥಿತಿ ನಿರ್ಮಾಣಗೊಂಡಿದೆ. ರಬಕವಿ ಬನಹಟ್ಟಿ ತಾಲ್ಲೂಕು ಜಮಖಂಡಿ ಮತ್ತು ಮುಧೋಳ ತಾಲ್ಲೂಕಿನಲ್ಲಿ ಹಂಚಿಕೆಯಾಗಿರುವುದರಿಂದ ಶಿಕ್ಷಕರಿಗೆ, ಪಾಲಕರಿಗೆ ಮತ್ತು ವಿದ್ಯಾರ್ಥಿಗಳಿಗೆ ಅತೀವ ತೊಂದರೆಯಾಗಿದೆ.

ಇಲ್ಲಿಯೇ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಸ್ಥಾಪನೆ ಮಾಡುವುದರಿಂದ ಬಿಸಿಯೂಟ, ಶಾಲಾ ಪಠ್ಯ ಪುಸ್ತಕ, ಶಾಲಾ ಸಮವಸ್ತ್ರಗಳನ್ನು ವಿತರಣೆ ಮಾಡಲು ಮತ್ತು ತಾಲ್ಲೂಕು ಶೈಕ್ಷಣಿಕವಾಗಿ ಇನ್ನಷ್ಟು ಅಭಿವೃದ್ಧಿಯಾಗಲು ಅನುಕೂಲವಾಗುತ್ತದೆ ಎಂದು ಬಿ. ಡಿ. ನೇಮಗೌಡ ತಿಳಿಸಿದರು.

ಈ ದಿಶೆಯಲ್ಲಿ ತಮ್ಮೊಂದಿಗೆ ಬೆಂಗಳೂರಿಗೆ ನಿಯೋಗ ಬರಲು ತಾವು ಸಿದ್ಧರಿರುವುದಾಗಿ ನೌಕರರ ಸಂಘದ ಪದಾಧಿಕಾರಿಗಳು ಶಾಸಕ ಸಿದ್ದು ಸವದಿಯವರಿಗೆ ತಿಳಿಸಿದರು.

ಈ ಕುರಿತು ಆದಷ್ಟು ಬೇಗನೆ ಶಿಕ್ಷಣ ಸಚಿವರು ಮತ್ತು ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚೆ ಮಾಡಿ ಮುಂದಿನ ಕ್ರಮವನ್ನು ತೆಗೆದುಕೊಳ್ಳಲಾಗುವುದು ಎಂದು ಶಾಸಕ ಸಿದ್ದು ಸವದಿ ತಿಳಿಸಿದರು.

ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಘಟಕದ ಕಾರ್ಯದರ್ಶಿ ಬಸವರಾಜ ಹನಗಂಡಿ, ಬಾಬಾಗೌಡ ಪಾಟೀಲ, ಸಿ. ಎಚ್. ಬುದ್ನಿ, ಶಿವು ಯಾದವಾಡ, ಅರ್ಜುನ ಕಾಖಂಡಕಿ, ಬಿ. ಬಿ. ಮುಧೋಳ, ಬಸವರಾಜ ಹಳೆಮನಿ, ವಿಜಯಕುಮಾರ ಹಲಕುರ್ಕಿ, ಮಲ್ಲಿಕಾರ್ಜುನ ಗಡೆನ್ನವರ, ಶೈಲಾ ಮಿರ್ಜಿ ಸೇರಿದಂತೆ ಇನ್ನೂ ಅನೇಕರು ಉಪಸ್ಥಿತರಿದ್ದರು.

# ಜಿಲ್ಲಾ ಎಪಿಡೆಮಿಯೋಲಾಜಿಸ್ಟ್ ಹುದ್ದೆಗೆ ಅರ್ಜಿ ಆಹ್ವಾನ

**ಕೊಪ್ಪಳ :** ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಜಿಲ್ಲಾ ಸರ್ವೇಕ್ಷಣಾ ಘಟಕದ ಐಡಿಎಸ್‌ಪಿ ಕಾರ್ಯಕ್ರಮದಡಿಯಲಲಿ ಗುತ್ತಿಗೆ ಆಧಾರದಲ್ಲಿ ಹಾಗೂ ನವೀಕರಣದ ಷರತ್ತಿಗೊಳಪಟ್ಟು ಎನ್.ಹೆಚ್.ಎಂ ನಿಯಮಾವಳಿ ಹಾಗೂ ಮೆರಿಟ್ ಮತ್ತು ರೋಸ್ಟರ್ ಆಧಾರದ ಮೇಲೆ ಜಿಲ್ಲಾ ಎಪಿಡೆಮಿಯೋಲಾಜಿಸ್ಟ್ ಹುದ್ದೆ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಹುದ್ದೆಯ ನೇಮಕಾತಿಗೆ ಸಂಬಂಧಿಸಿದ ಪೂರ್ಣ ಪ್ರಮಾಣದ ಹಕ್ಕನ್ನು ಜಿಲ್ಲಾ ಆಯ್ಕೆ ಸಮಿತಿ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘವು ಕಾಯ್ದಿರಿಸಿಕೊಂಡಿದೆ. ಆಯ್ಕೆಯನ್ನು ಮೆರಿಟ್ ಕಮ್ ರೋಸ್ಟರ್ ಆಧಾರದಲ್ಲಿ ಮಾಡಲಾಗುವುದು. ಅರ್ಹ ಅಭ್ಯರ್ಥಿಗಳು ಜಿಲ್ಲಾ ವೆಬ್‌ತಾಣ www.koppal.nic.in ಮೂಲಕ ಆನ್‌ಲೈನ್ ಅರ್ಜಿಯನ್ನು ಸಲ್ಲಿಸಬೇಕು. ಯಾವುದೇ ಕಾರಣಕ್ಕೂ ಆಫ್‌ಲೈನ್ ಅರ್ಜಿಯನ್ನು ಸ್ವೀಕರಿಸುವುದಿಲ್ಲ.

ಅರ್ಜಿ ಸಲ್ಲಿಸಲು ಜೂನ್ 12 ಕೊನೆಯ ದಿನವಾಗಿದೆ. ವಿದ್ಯಾರ್ಹತೆ,ವೇತನಮುಂತಾದವಿವರಗಳಿಗಾಗಿಜಿಲ್ಲಾ ವೆಬ್‌ತಾಣದಲ್ಲಿರುವನೇಮಕಾತಿಅಧಿಸೂಚನೆಯನ್ನು ಓದಿಕೊಳ್ಳಬಹುದು. ಕಚೇರಿ ವೇಳೆಯಲ್ಲಿ ದೂ.ಸಂ. 08539-230423 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಉಪಾಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿಗಳ ಸಾಧನೆ ಶ್ಲಾಘನೀಯ



**ಬನಹಟ್ಟಿ :** ಇಲ್ಲಿಯ ಗೆಳೆಯರ ಬಳಗದಿಂದ ಪ್ರತಿಭಾವಂತ ವಿದ್ಯಾರ್ಥಿಗಳ ಹಾಗು ರ್ಯಾಂಕ್ ವಿಜೇತರನ್ನು ಇತ್ತೀಚೆಗೆ ಸನ್ಮಾನಿಸಲಾಯಿತು.

ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ರಾಜ್ಯಕ್ಕೆ ಮೂರನೇ ಸ್ಥಾನ ಪಡೆದಿರುವ ಲಕ್ಷ್ಮಿ ಹೆರಕಲ್ ಸೇರಿದಂತೆ ಶಾರದಾ ಗಣೇಶನವರ, ಬಸವರಾಜ ಬಂಗಿ,

ಕಾರ್ತಿಕ ಬಾಬಾನಗರ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಲಾಯಿತು. ಎಲ್ಲ ಸಾಧಕರು ಇದೇ ಗೆಳೆಯರ ಬಳಗದ ಮಕ್ಕಳಾಗಿದ್ದು ಮತ್ತೊಂದು ವಿಶೇಷ. ಹಿರಿಯ ಸಾಹಿತಿ ಮಲ್ಲಿಕಾರ್ಜುನ ಹುಲಗಬಾಳಿ ಮಾತನಾಡಿ, ಪಾಲಕರ ಪ್ರೋತ್ಸಾಹ ಮತ್ತು ವಿದ್ಯಾರ್ಥಿಗಳ ಶ್ರಮದಿಂದ ಈ ಸಾಧನೆ ಸಾಧ್ಯವಾಗಿದೆ. ವಿದ್ಯಾರ್ಥಿಗಳು ಅಧ್ಯಯನದೊಂದಿಗೆ ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಆಸಕ್ತಿ ತೋರಿಸಿರುವದು ಮೆಚ್ಚುಗೆಯ ವಿಷಯವಾಗಿದೆ ಎಂದರು. ಎಸ್.ಎಸ್.ಎಲ್.ಸಿ. ಹಾಗು ಪಿ.ಯು. ಪರೀಕ್ಷೆಯಲ್ಲಿ ಬನಹಟ್ಟಿಯ

ಹಿರಿಮೆ ರಾಜ್ಯವ್ಯಾಪಿ ಸಾಧನೆಗೆ ಪ್ರತಿ ವರ್ಷ ನಡೆಯುತ್ತಿರುವದು ಗಮನಾರ್ಹವೆಂದರು. ವೇದಿಕೆ ಮೇಲೆ ಪ್ರವೀಣ ತುಕ್ಕನ್ನವರ, ಮಲ್ಲಿಕಾರ್ಜುನ ತುಂಗಳ, ಈರಣ್ಣ ಬಾಣಕಾರ, ಆನಂದ ಕುಲಗೋಡ, ಆನಂದ ಕುಳ್ಳಿ, ಆನಂದ ಬಂಗಿ ಮುಂತಾದವರು ಹಾಜರಿದ್ದರು.

ಬಾಳು ಗಣೇಶನವರ, ರವೀಂದ್ರ ಚನಪನ್ನವರ, , ವಿಜಯ ಬಾಬಾನಗರ, ಪ್ರಸಾದ ಹುಲಗಬಾಳಿ, ಮಂಡಿ, ಸಂಜು ಜವಳಗಿ, ದಾನಪ್ಪ ಉಮದಿ ಸೇರಿದಂತೆ ಇನ್ನೂ ಅನೇಕರು ಪಾಲ್ಗೊಂಡಿದ್ದರು.

# ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆದ 18 ಗಂಟೆಗಳ DC, CEO ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ಸಭೆಯ ಕೊನೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೀಡಿದ ಸೂಚನೆಗಳು

* ಜಿಲ್ಲೆಯ ಅಭಿವೃದ್ಧಿ ಕಾರ್ಯ, ಸರ್ಕಾರದ ಯೋಜನೆಗಳ ಸಮರ್ಪಕ ಅನುಷ್ಠಾನ ಡಿಸಿ, ಎಸ್ಪಿ, ಸಿಇಓಗಳ ಜವಾಬ್ದಾರಿ. ಮೂರೂ ಅಧಿಕಾರಿಗಳು ಸಮನ್ವಯದಿಂದ ಯಾವುದೇ ಇಗೋ ಇಲ್ಲದೆ ಕಾರ್ಯನಿರ್ವಹಿಸಬೇಕು. ಜಿಲ್ಲಾ ಉಸ್ತುವಾರಿ ಮಂತ್ರಿ, ಕಾರ್ಯದರ್ಶಿಗಳೊಂದಿಗೆ ಸಮನ್ವಯದೊಂದಿಗೆ ಕಾರ್ಯ ನಿರ್ವಹಿಸಿ.

* ನಾವು ಏನು ಬದಲಾವಣೆ ತರುತ್ತೇವೆ ಎಂದು ಹೇಳಿ ಅಧಿಕಾರಕ್ಕೆ ಬಂದಿದ್ದೇವೆಯೋ ಅದನ್ನು ಜಾರಿಗೊಳಿಸುವುದು ನಿಮ್ಮ ಹೊಣೆ.

ನಿಮ್ಮ ಹೆಜ್ಜೆ ಗುರುತು ಜಿಲ್ಲೆಯಲ್ಲಿ ಮೂಡುವಂತಹ ಕಾರ್ಯವನ್ನುನೀವು ಮಾಡಬೇಕು. ಬಾಬಾ ಸಾಹೇಬ್ ಅವರು

ಹೇಳಿದ ಹಾಗೆ ಸ್ವಾತಂತ್ರ್ಯ ಬಂದಿರುವುದು ಸಾರ್ಥಕವಾಗುವುದು ಎಲ್ಲರಿಗೂ ಆರ್ಥಿಕ ಮತ್ತು ಸಾಮಾಜಿಕ ಶಕ್ತಿ ಬಂದಾಗ ಮಾತ್ರ, ಇದನ್ನು ಸಾಧ್ಯವಾಗಿಸಬೇಕಾದುದು ನಿಮ್ಮ ಕರ್ತವ್ಯ.

* ಪ್ರಣಾಳಿಕೆಯಲ್ಲಿನ ನಮ್ಮ 533 ಭರವಸೆಗಳ ಪೈಕಿ 242 ಭರವಸೆಗಳನ್ನು ನಾವು ಈಗಾಗಲೇ ಈಡೇರಿಸಿದ್ದೇವೆ. ಇದರ ಸಮರ್ಪಕ ಅನುಷ್ಠಾನ ನಿಮ್ಮೆಲ್ಲರ ಹೊಣೆಗಾರಿಕೆ.

*ಅಸ್ಪೃಶ್ಯತೆಇನ್ನೂಹಲವುಭಾಗಗಳಲ್ಲಿಜೀವಂತವಾಗಿದೆ; ಇದೇ ರೀತಿ ಬಾಲ್ಯ ವಿವಾಹದಂತಹ ಪಿಡುಗುಗಳನ್ನು ಸಂಪೂರ್ಣವಾಗಿ ನಿಯಂತ್ರಿಸಬೇಕು.

* ಜಿಲ್ಲಾಧಿಕಾರಿಗಳು ಜನಸಾಮಾನ್ಯರ ಬಗ್ಗೆ ಕೇವಲ ಸಿಂಪಥಿ(ಥಿಟಔಿಚಿಣಖಿಥಿ)ಯಲ್ಲ,ಬಗ್ಗೆ ಎಂಪಥಿ(ಇಟಔಿಚಿಣಖಿಥಿ) ಬೆಳೆಸಿಕೊಳ್ಳಬೇಕು.

* ಪತ್ರಿಕೆಗಳಲ್ಲಿ ಬರುವ ಟೀಕೆಗಳು, ವರದಿಗಳಿಗೆ ತಕ್ಷಣ ಸ್ಪಂದಿಸಬೇಕು. ಇದರಿಂದ ಜನಸಾಮಾನ್ಯರ ಹಲವು ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಸಾಧ್ಯವಿದೆ.

* ನೀವು ಸರ್ಕಾರ ಮತ್ತು ಜನಸಾಮಾನ್ಯರಿಗೆ ಸೇತುವೆಯಾಗಿ ಕಾರ್ಯನಿರ್ವಹಿಸಬೇಕು.

* ತಂತ್ರಜ್ಞಾನ ಜನಸಾಮಾನ್ಯರ ಗರಿಷ್ಠ ಹಿತಕ್ಕೆ ಬಳಕೆಯಾಗುವಂತೆ ನೋಡಿಕೊಳ್ಳಬೇಕು.

# ಕಲಬುರಗಿ ಜಿಲ್ಲಾಧಿಕಾರಿಗೆ ಪಾಕಿಸ್ತಾನಿ ಎಂದು ಕರೆದ ರವಿಕುಮಾರ ವಿರುದ್ಧ ಕ್ರಮಕ್ಕೆ ಆಗ್ರಹ



**ವಿಜಯಪುರ :** ಕಲಬುರಗಿ ಜಿಲ್ಲಾಧಿಕಾರಿಗಳನ್ನು ಪಾಕಿಸ್ತಾನದಿಂದ ಬಂದವರು ಎಂಬ ವಿಧಾನ ಪರಿಷತ್ ಸದಸ್ಯ ಎನ್. ರವಿಕುಮಾರ ಅವರ ಹೇಳಿಕೆ ಖಂಡಿಸಿ ಅವರ ಮೇಲೆ ಕಾನೂನು ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿ ಜಿಲ್ಲಾ ಕಾಂಗ್ರೆಸ್ ಅಲ್ಪ ಸಂಖ್ಯಾತರ ಘಟಕದ ವತಿಯಿಂದ ಜಿಲ್ಲಾಧಿಕಾರಿ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು. ವಿಧಾನ ಪರಿಷತ್ ಸದಸ್ಯ ಎನ್. ರವಿಕುಮಾರ ಅವರ ಮೇಲೆ ಕಾನೂನು ಕ್ರಮ ಜರುಗಿಸಿ ವಿಧಾನ ಪರಿಷತ್ ಸ್ಥಾನದಿಂದ ವಜಾಗೊಳಿಸಲು ಮನವಿಯಲ್ಲಿ ಆಗ್ರಹಿಸಲಾಗಿದೆ.

ವಿಜಯಪುರಜಿಲ್ಲಾಕಾಂಗ್ರೆಸ್‌ಅಲ್ಪಸಂಖ್ಯಾತ ಘಟಕದ ಪದಾಧಿಕಾರಿಗಳ ನಿಯೋಗ ಜಿಲ್ಲಾಧಿಕಾರಿಗಳನ್ನು ಭೇಟಿ ಮಾಡಿ ಅವರ ಮುಖಾಂತರ ರಾಜ್ಯಪಾಲರಿಗೆ ಮನವಿ ಸಲ್ಲಿಸಿತು.

ನಿಯೋಗದ ನೇತೃತ್ವ ವಹಿಸಿದ್ದ ಕಾಂಗ್ರೆಸ್ ಅಲ್ಪ ಸಂಖ್ಯಾತ ಘಟಕದ ಜಿಲ್ಲಾಧ್ಯಕ್ಷ ಶಕೀಲ ಬಾಗಮಾರೆ ಮಾತನಾಡಿ, ವಿಧಾನಪರಿಷತ್ ಸದಸ್ಯರಾಗಿರುವ ಎನ್. ರವಿಕುಮಾರ ಅವರು ಕಲಬುರಗಿ ಜಿಲ್ಲಾಧಿಕಾರಿಗಳನ್ನು ಪಾಕಿಸ್ತಾನಿ ಎಂದು ಕರೆಯುವ ಮೂಲಕ ದೊಡ್ಡ ತಪ್ಪು ಮಾಡಿದ್ದಾರೆ. ಈ ದೇಶದ ಹೆಮ್ಮೆಯ ನಾಗರಿಕರಾಗಿರುವ, ಜವಾಬ್ದಾರಿಯುತ ಸ್ಥಾನದಲ್ಲಿರುವ ಓರ್ವ ಮಹಿಳಾಐಎಎಸ್ ಅಧಿಕಾರಿಯನ್ನು ಈ ರೀತಿ ಪಾಕಿಸ್ತಾನಕ್ಕೆ ಸಂಬಂಧಿಸಿ ಹೇಳಿಕೆ ನೀಡಿರುವುದು ಖಂಡನೀಯ ಎಂದರು.

ಪ್ರತಿಯೊಬ್ಬರು ಈ ದೇಶದ ಹೆಮ್ಮೆಯ ನಾಗರಿಕರು, ದೇಶಾಭಿಮಾನಿಗಳು, ಈ ದೇಶದ ನಿವಾಸಿಗಳನ್ನೇ ಪಾಕಿಸ್ತಾನಿ ಎಂದು ಕರೆದರ 'ಯಾರ ಮನಸ್ಸಿಗೂ ನೋವುಂಟಾಗುತ್ತದೆ. ವಿಧಾನ ಪರಿಷತ್ ಎಂಬುದು ಚಿಂತಕರ ಚಾವಡಿ, ಪ್ರಜ್ಞಾವಂತರ ತಾಣ ಎಂದು ಕರೆಯಲಾಗುತ್ತದೆ. ಇಂತಹ ಪವಿತ್ರ ಮೇಲ್ಮನೆಯ ಸದಸ್ಯನಾಗಿರುವ ಎನ್. ರವಿಕುಮಾರ ತಮ್ಮನಾಲಿಗೆ ಹರಿಬಿಟ್ಟಿರುವುದು ಖಂಡನೀಯ. ಇದು ಅವರ ಮನೋಸ್ಥಿತಿಯನ್ನು ತೋರುತ್ತದೆ. ಈ ರೀತಿಯ ಮನೋಸ್ಥಿತಿ ಇರುವವರು ಮೇಲ್ಮನೆಯ ಸದಸ್ಯನಾಗಿ ಇರಲು ಸಹ ಅರ್ಹರಲ ?ಲಎಂದು ಹೇಳಿದರು.

ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ವಿಧಾನ ಪರಿಷತ್ ಸದಸ್ಯ ಎನ್. ರವಿಕುಮಾರ ಅವರ ಮೇಲೆ ಕಾನೂನು ಕ್ರಮ ಕೈಗೊ?ಂಡು ವಿಧಾನ ಪರಿಷತ್ ಸ್ಥಾನದಿಂದ ವಜಾಗೊಳಿಸುವಂತೆ ಸರ್ಕಾರಕ್ಕೆ ನಿರ್ದೇಶನ ನೀಡಬೇಕು. ಅವರ ಮೇಲೆ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು. ಪ್ರಮುಖರಾದ ನ್ಯಾಯವಾದಿ ಎನ್.ಬಿ. ಕಾಸರ, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಚಾಂದಸಾಬ ಗಡಗಲಾವ, ಮುನ್ನಾಭಕ್ಷಿ, ಸರ್ಫರಾಜ ಅಗಸಬಾಳ, ಹಮೀದ ಮನಗೂಳಿ ಮೊದಲಾದವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಜು. 12 ರಂದು ಜಿಲ್ಲೆಯಾದ್ಯಂತ ರಾಷ್ಟ್ರೀಯ ಲೋಕ ಅದಾಲತ್: ರಾಜಿ ಸಂಧಾನದ ಮೂಲಕ ಪ್ರಕರಣ ಇತ್ಯರ್ಥಕ್ಕೆ ಅವಕಾಶ: ಜಿಲ್ಲಾ ನ್ಯಾಯಾಧೀಶ ಡಾ.ಕಸನಪ್ಪ ನಾಯಕ




**ವಿಜಯಪುರ :** ಜಿಲ್ಲಾ ಕೇಂದ್ರವೂ ಸೇರಿದಂತೆ ಜಿಲ್ಲೆಯಾದ್ಯಂತ ಇರುವ ಎಲ್ಲ ಅಧೀನ ನ್ಯಾಯಾಲಯಗಳಲ್ಲಿ ಜುಲೈ 12 ರಂದು ರಾಷ್ಟ್ರೀಯ ಲೋಕ ಅದಾಲತ್ ಆಯೋಜಿಸಲಾಗಿದ್ದು, ಈ ಅದಾಲತ್‌ನಲ್ಲಿ ಕಕ್ಷಿದಾರರು ಭಾಗವಹಿಸಿ ರಾಜಿ ಸಂಧಾನದ ಮೂಲಕ ಪ್ರಕರಣ ಇತ್ಯರ್ಥಕ್ಕೆ ಅವಕಾಶವಿರುವುದರಿಂದ ಈ ಅದಾಲತ್ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಡಾ. ಕಸನಪ್ಪ ನಾಯಕ ಅವರು ತಿಳಿಸಿದರು.

ಗುರುವಾರ ಜಿಲ್ಲಾ ನ್ಯಾಯಾಲಯ ಸಂಕೀರ್ಣದ ಎಡಿಆರ್ ಕಟ್ಟಡದಲ್ಲಿ ಆಯೋಜಿಸಿದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದಅವರು,ರಾಷ್ಟ್ರೀಯಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಎಲ್ಲ ವರ್ಗದ ಕಕ್ಷಿದಾರರಿಗೆ ಅನುಕೂಲವಾಗುವ ದೃಷ್ಟಿಯಿಂದ ಜಿಲ್ಲಾ ಕೇಂದ್ರ ಹಾಗೂ ಜಿಲ್ಲೆಯ ಎಲ್ಲ ತಾಲೂಕಾ ನ್ಯಾಯಾಲಯಗಳಲ್ಲಿ ಜುಲೈ 12 ರಂದು ರಾಷ್ಟ್ರೀಯ ಲೋಕ ಅದಾಲತ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಲೋಕ ಅದಾಲತ್ ಕಾರ್ಯಕ್ರಮದಲ್ಲಿ ರಾಜಿ ಸಂಧಾನಕ್ಕೆ ಒಳಪಡಬಹುದಾದ ವ್ಯಾಜ್ಯ ಪೂರ್ವ ಪ್ರಕರಣಗಳು, ಚೆಕ್ ಅಮಾನ್ಯದ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ಉದ್ಯೋಗದಲ್ಲಿ ಪುನರ್ ಸ್ಥಾಪಿಸಲ್ಪಡುವ ಪ್ರಕರಣಗಳು, ವಿದ್ಯುತ್ ಹಾಗೂ ನೀರಿನ ಶುಲ್ಕ, ರಾಜಿಯಾಗಬಲ್ಲ ಅಪರಾಧಿಕ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಮತ್ತು ಇತರೆ ಸಿವಿಲ್ ಪ್ರಕರಣಗಳು, ಕರ್ನಾಟಕ ರಿಯಲ್ ಎಸ್ಟೇಟ್ ಪ್ರಾಧಿಕಾರಕ್ಕೆ ಸಂಬಂಧಪಟ್ಟ ಪ್ರಕರಣಗಳು (ರೇರಾ), ಜಿಲ್ಲಾ ಗ್ರಾಹಕರ ವೇದಿಕೆಯಲ್ಲಿನ ಪ್ರಕರಣಗಳು, ಸಾಲ ವಸೂಲಾತಿ ನ್ಯಾಯಾಧೀಕರಣದ ಪ್ರಕರಣಗಳು (ಡಿಆರ್ಟಿ), ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ (ಕೆಇಆರ್ಸಿ), ಕಾಯಂ ಜನತಾ ನ್ಯಾಯಾಲಯದಲ್ಲಿನ ಪ್ರಕರಣಗಳು, ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳು, ಮೋಟಾರು ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು, ಕಾರ್ಮಿಕ ವಿವಾದಗಳು, ಭೂಸ್ವಾಧೀನ ಪ್ರಕರಣಗಳು, ವೇತನ ಮತ್ತು ಭತ್ಯೆಗಳಿಗೆ ಸಂಬಂಧಿಸಿದ ಸೇವಾ ಪ್ರಕರಣಗಳು, ಪಿಂಚಣಿ ಪ್ರಕರಣಗಳು, ಕಂದಾಯ ಪ್ರಕರಣಗಳು ರಾಜಿಯಾಗಬಲ್ಲ ಸಿವಿಲ್ ಮತ್ತು ಇತರೆ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ಹೇಳಿದರು.

ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ದಿನಾಂಕ: 01-05-2025ಕ್ಕೆ 45,900 ಸಿವಿಲ್ ಪ್ರಕರಣಗಳು ಹಾಗೂ 24,535 ಕ್ರಿಮಿನಲ್ ಪ್ರಕರಣಗಳು ಒಳಗೊಂಡಂತೆ ಒಟ್ಟು 70,435 ಪ್ರಕರಣಗಳು ವಿಚಾರಣೆಗೆ ಬಾಕಿ ಇದ್ದು, ಇವುಗಳಲ್ಲಿ ಈಗಾಗಲೇ 1,225 ಸಿವಿಲ್ ಪ್ರಕರಣಗಳು ಹಾಗೂ 727 ಕ್ರಿಮಿನಲ್ ಪ್ರಕರಣಗಳು ಸೇರಿದಂತೆ ಒಟ್ಟು 1,952 ಪ್ರಕರಣಗಳನ್ನು ಇತ್ಯರ್ಥಕ್ಕಾಗಿ ಗುರುತಿಸಲಾಗಿದೆ. ಸಂಬಂಧಿಸಿದ ವಕೀಲರು ಹಾಗೂ ಕಕ್ಷಿದಾರರೊಂದಿಗೆ ಮಾತುಕತೆಯ ಮೂಲಕ ಇನ್ನೂ ಹೆಚ್ಚಿನ ಪ್ರಕರಣಗಳನ್ನು ಸಹ ರಾಜಿಗಾಗಿ ಗುರುತಿಸಲಾಗುತ್ತಿದೆ. ಹೆಚ್ಚಿನ ಪ್ರಕರಣಗಳು ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಇತ್ಯರ್ಥಗೊಳ್ಳುವ ನಿರೀಕ್ಷೆ ಇದೆ ಎಂದು ಅವರು ತಿಳಿಸಿದರು.

ಜಿಲ್ಲೆಯಲ್ಲಿ ಜುಲೈ 12 ರಂದು ಜರುಗುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಕಕ್ಷಿದಾರರು ತಮ್ಮ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಂಡು ನೆಮ್ಮದಿಯ ಜೀವನಕ್ಕೆ ನಾಂದಿ ಹಾಡಲು ಸುವರ್ಣಾವಕಾಶ ಕಲ್ಪಿಸಿದ್ದು, ಇದರ ಸದುಪಯೋಗ ಪಡೆದುಕೊಳ್ಳುವಂತೆ ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಅರವಿಂದ ಎಸ್ ಹಾಗರಗಿ, ಜಿಲ್ಲಾ ನ್ಯಾಯವಾದಿಗಳ ಸಂಘದ ಕಾರ್ಯದರ್ಶಿಗಳಾದ ಎಸ್.ಎಸ್. ಚೂರಿ ಉಪಸ್ಥಿತರಿದ್ದರು.

# ತಂಬಾಕು ಸೇವನೆಯ ದುಷ್ಪರಿಣಾಮದ ಅರಿವು ಎಲ್ಲರಿಗೂ ಅಗತ್ಯ: ಸಂತೋಷ ಬಂಡೆ



**ವಿಜಯಪುರ :** ಯುವ ಜನತೆ ತಂಬಾಕು ಸೇವನೆಯಿಂದ ಮುಕ್ತರಾದಾಗ ಮಾತ್ರ ಸದೃಢ ದೇಶ ನಿರ್ಮಾಣವಾಗಲು ಸಾಧ್ಯ. ಗ್ರಾಮೀಣ ಪ್ರದೇಶದಲ್ಲಿ ತಂಬಾಕಿನಿಂದ ಆಗುವ ಪರಿಣಾಮದ ಬಗ್ಗೆ ಎಲ್ಲರಲ್ಲಿ ಅರಿವು ಮೂಡಿಸಬೇಕು ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.

ಶನಿವಾರ ತಾಲೂಕಿನ ನಾಗಠಾಣ ಗ್ರಾಮದ ಅರಿವು ಕೇಂದ್ರದಲ್ಲಿ ಹಮ್ಮಿಕೊಂಡ 'ವಿಶ್ವ ತಂಬಾಕು ರಹಿತ ದಿನ'ವನ್ನು ಉದ್ಘಾಟಿಸಿ ಮಾತನಾಡಿದರು.

ತಂಬಾಕು ಸೇವನೆಯಿಂದ ಕೇವಲ ಗಂಟಲು, ಶ್ವಾಸಕೋಶ ಮಾತ್ರವಲ್ಲದೆ ಅಡಿಯಿಂದ ಮುಡಿವರೆಗೆ ನಮ್ಮ ದೇಹದ ಪ್ರತಿಯೊಂದು ಜೀವಕೋಶದ ಮೇಲೆ ಅದು ಮಾರಕ ಪರಿಣಾಮವನ್ನುಂಟು ಮಾಡುತ್ತದೆ. ಮಾನವಾಭಿವೃದ್ಧಿಗೆ ದೊಡ್ಡ ಕಂಟಕವಾಗಿರುವ ಈ ಪಿಡುಗನ್ನು ಹೋಗಲಾಡಿಸಿ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಮುಂದಾಗಬೇಕು ಎಂದು ತಿಳಿಸಿದರು.

ಗ್ರಂಥಪಾಲಕ ಮಂಜುನಾಥ ಗಂಗನಳ್ಳಿ ಮಾತನಾಡಿ, ಸಾರ್ವಜನಿಕ ಸ್ಥಳಗಳಲ್ಲಿ ಬೀಡಿ, ಸಿಗರೇಟ್ ಸೇವನೆ ಮಾಡುವುದರಿಂದ ಆರೋಗ್ಯ ಕೆಡುವುದಲ್ಲದೆ ಸುತ್ತಮುತ್ತಲಿನ ಇತರರ ಆರೋಗ್ಯವು ಹದಗೆಡುತ್ತದೆ. ದೇಶದಾದ್ಯಂತ ಸಾವಿರಾರು ಜನರು ತಂಬಾಕು ಸೇವನೆ ಮಾಡಿ ಜೀವ ಕಳೆದುಕೊಳ್ಳುತ್ತಿರುವದು ಆತಂಕಕಾ–ರಿಯಾಗಿದೆ ಎಂದು ಹೇಳಿದರು.

ತಂಬಾಕು ಸೇವನೆಯ ದುಷ್ಪರಿಣಾಮಗಳ ಕುರಿತು ಭಿತ್ತಿ ಚಿತ್ರಗಳನ್ನು ಪ್ರದರ್ಶಿಸಲಾಯಿತು. ಗ್ರಾಮದ ವಿಶ್ವನಾಥ ಹಂಡಿ, ಸುರೇಶ ಕತ್ನಳ್ಳಿ, ಆನಂದ ಗಂಗನಳ್ಳಿ, ರಾಜು ಕತ್ನಳ್ಳಿ ಸೇರಿದಂತೆ ಅನೇಕ ಮಕ್ಕಳು ಭಾಗವಹಿಸಿದ್ದರು.

# ಕಾಂಗ್ರೆಸ್ ಸರ್ಕಾರದ ನಡೆ ಖಂಡಿಸಿ ಬಿಜೆಪಿ ಬೃಹತ ಪ್ರತಿಭಟನೆ



**ವಿಜಯಪುರ :** ಬಿಜೆಪಿ ಜಿಲ್ಲಾ ಘಟಕದ ವತಿಯಿಂದ ರಾಜ್ಯ ಕಾಂಗ್ರೆಸ್ ಸರ್ಕಾರ ಸರ್ಕಾರಿ ಆಸ್ಪತ್ರೆಯ ಆವರಣದಲ್ಲಿನ ಜನೌಷಧಿ ಕೇಂದ್ರಗಳನ್ನು ಮುಚ್ಚಲು ಹೊರಟಿರುವ ಸರ್ಕಾರದ ಕ್ರಮವನ್ನು ಖಂಡಿಸಿ ಕಪ್ಪು ಬಟ್ಟೆ ಕಟ್ಟಿಕೊಂಡು ಸರ್ಕಾರದ ವಿರುದ್ಧ ಕೆಲ ಘಂಟೆಗಳ ಕಾಲ ಘೋಷಣೆಗಳನ್ನು ಕೂಗಿ ಧರಣಿ ಸತ್ಯಾಗ್ರಹವನ್ನು ನಗರದ ಜಿಲ್ಲಾ ಸರ್ಕಾರಿ ಆಸ್ಪತ್ರೆಯ ಆವರಣದಲ್ಲಿ ನಡೆಸಲಾಯಿತು.

ಈ ಸಂದರ್ಭದಲ್ಲಿ ಸಂಸದರಾದ ರಮೇಶ ಜಿಗಜಿಣಗಿ ಮಾತನಾಡಿ, ರಾಜ್ಯದ ಎಲ್ಲಾ ಜಿಲ್ಲಾ ಆಸ್ಪತ್ರೆಗಳ ಆವರಣದಲ್ಲಿ ಜನೌಷಧಿ ಕೇಂದ್ರಗಳ ಸೇವೆಯನ್ನು ಸ್ಥಗಿತಗೊಳಿಸುವ ನಿರ್ಣಯ ಕೈಗೊಂಡ ರಾಜ್ಯ ಕಾಂಗ್ರೆಸ್ ಸರ್ಕಾರದ ನಿರ್ಧಾರದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಬಡ ರೋಗಿಗಳಿಗೆ ವರದಾನವಾಗಿರುವ ಈ ಜನೌಷಧಿ ಕೇಂದ್ರಗಳನ್ನು ಸ್ಥಗಿ–ತಗೊಳಿಸುವ ನಿರ್ಧಾರ ಬಡವರ ವಿರೋಧಿಯಾಗಿದೆ. ಸರ್ಕಾರಿ ಆಸ್ಪತ್ರೆಗಳಿಗೆ ಚಿಕಿತ್ಸೆಗೆ ಬರುವವರು ಬಡವರು ಮಾತ್ರ. ಬಡವರಿಗೆ ಅನುಕೂಲಕರವಾದ ಈ ಕೇಂದ್ರಗಳನ್ನು ವಿನಾಕಾರಣ ಸ್ಥಗಿ–ತಗೊಳಿಸುವ ಅರ್ಥವೇನು?. ಸಚಿವ ದಿನೇಶ ಗುಂಡೂರಾವ್, ಮುಖ್ಯಮಂತ್ರಿ ಸಿದ್ಧರಾಮ ಅವರ ಪಕ್ಷದ ಮುಖಂಡರು ಶ್ರೀಮಂತ–ರಿರಬಹುದು, ಅವರು ಜಿಲ್ಲಾ ಆಸ್ಪತ್ರೆಗೆ ಹೋಗುವುದಿಲ್ಲ. ಬಡವರ ವಿರೋಧಿ ನಿರ್ಧಾರ ಕೈಗೊಂಡಿರುವ ಸರ್ಕಾದ ಕ್ರಮ ಖಂಡನೀಯ. ಕೂಡಲೇ ಸರ್ಕಾರ ಈ ನಿರ್ಧಾರವನ್ನು ಹಿಂದಕ್ಕೆ ಪಡೆಯಬೇಕು ಎಂದು ಅವರು ಒತ್ತಾಯಿಸಿದರು. ಬೇರೆ ಮೆಡಿಕಲ್‌ಗಳಲ್ಲಿ 100ರೂ ಗೆ ಸಿಗುವಂತಹ ಔಷಧಿ ಜನೌಷಧಿ ಮಳಿಗೆಗಳಲ್ಲಿ 10 ರೂಪಾಯಿಗೆ ಉತ್ತಮ ಗುಣಮಟ್ಟದಲ್ಲಿ ಸಿಗುತ್ತದೆ. ಆದರೆ ರಾಜ್ಯ ಸರ್ಕಾರ ಹಾಗೂ ಆರೋಗ್ಯ ಸಚಿವರು ಮೆಡಿಕಲ್ ಮಾಫಿಯಾದವರ ಒತ್ತಡಕ್ಕೆ ಮಣಿದು ಹೀಗೆಲ್ಲ ಮಾಡುತ್ತಿದ್ದಾರೆಯೇ ಎಂದು ಜನಸಾಮಾನ್ಯರು ಮಾತನಾಡುತ್ತಿದ್ದಾರೆ. ಮಾತೆತ್ತಿದರೆ ಅಹಿಂದ ಬಗ್ಗೆ ಮಾತನಾಡುವ ಕಾಂಗ್ರೆಸ್‌ನಾಯಕರೇನೀವೆಕುಳಿತುಕೊಂಡು ಜನೌಷಧಿ ತೆಗೆಸುವ ಮೂಲಕ ಬಡವ–ರಿಗೆ ಅನ್ಯಾಯ ಮಾಡುತ್ತಿದ್ದೀರಿ. ಇದು ಸರಿಯಾದ ಕ್ರಮವಲ್ಲ, ತಕ್ಷಣ ಈ ಆದ–'ೇಶವನ್ನು ಹಿಂಪಡೆಯಬೇಕು ಎಂದು ಜಿಗಜಿಣಗಿ ಅವರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಎಸ್. ಕೆ. ಬೆಳ್ಳುಬ್ಬಿ ಮಾತನಾಡಿ, ಸರ್ಕಾರಿ ಆಸ್ಪತ್ರೆಗೆ ಬರುವವರು ಬಡವರು, ಬಡವರ ಹೊಟ್ಟೆ ಮೇಲೆ ಕಲ್ಲು ಹಾಕುವ ಕೆಲಸ ಕಾಂಗ್ರೆಸ್ ಸರ್ಕಾರ ಮಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಮೋದಿ ಸರ್ಕಾರದ ಯೋಜನೆಯ ವಿರುದ್ಧ ಕಾಂಗ್ರೆಸ್ ಸರ್ಕಾರ ದ್ವೇಷದ ರಾಜಕಾರಣ ಮಾಡುತ್ತಿದೆ, ರಾಮರಾಜ್ಯ ಮಾಡುತ್ತೇನೆ ಎಂದವರು ಇವರು ರಾವಣ ರಾಜ್ಯ ಮಾಡಿದ್ದಾರೆ, ರಾಕ್ಷಸ ರಾಜ್ಯ ಮಾಡಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಗುರಲಿಂಗಪ್ಪ ಅಂಗಡಿ ಮಾತನಾಡಿ, ಪ್ರಧಾನಮಂತ್ರಿ ಜನ ಔಷಧಿ ಕೇಂದ್ರವನ್ನು ಎಲ್ಲಾ ಸರಕಾರಿ ಆಸ್ಪತ್ರೆಯ ಆವರಣದಲ್ಲಿ ನಡೆಸುವಂತಿಲ್ಲ ಎಂದು ಆದೇಶ ಹೊರಡಿಸಿ, ಈ ಆದೇಶಕ್ಕೆ ಸಮಜಾಯಿಸಿ ಸರಕಾರಿ ಆಸ್ಪತ್ರೆಯಲ್ಲಿ ಔಷಧಿಗಳನ್ನ ಮಾರಾಟ ಮಾಡುವಂತಿಲ್ಲ ಎನ್ನುವ ನಿಯಮದಡಿ ಕಾರಣ ಹೇಳಿ ಸಮಾಜಾಯಿಸಿ ಭಾರತ ಸರಕಾರದ ಮಹತ್ವಕಾಂಕ್ಷಿ ಯೋಜನೆಯಾದ ಪ್ರಧಾನಮಂತ್ರಿ ಜನ ಔಷಧಿ ಕೇಂದ್ರ ಹೊರಹಾಕಿದ್ದಾರೆ.

ಸರಕಾರಿ ಆಸ್ಪತ್ರೆಯಲ್ಲಿ ಉಚಿತವಾಗಿ ಕೊಡುವ ಔಷಧಿಗಳು ಲಭ್ಯ ಇಲ್ಲಾ ಅಂದ್ರೇ ರೋಗಿಗಳು ಹೊರಗಡೆ ಹೋಗಿ ಜನ ಔಷಧಿ ಕೇಂದ್ರವನ್ನು ಹುಡುಕಾಡಬೇಕಾ? ಔಷಧಿ ಕೇಂದ್ರ ಸಿಗದೇ ಇದ್ದ ಪಕ್ಷದಲ್ಲಿ ರೋಗಿಗಳು ಅನಾವಶ್ಯಕವಾಗಿ ಹೆಚ್ಚಿನ ದರದ ಔಷಧಿಯನ್ನು ಖರೀದಿ ಮಾಡುವ ಅನಿವಾರ್ಯತೆ ಹುಟ್ಟಿ ಹಾಕಿದ ಕರ್ನಾಟಕ ಕಾಂಗ್ರೆಸ್ ಸರ್ಕಾರದ ಆರೋಗ್ಯ ಸಚಿವರಾದ ದಿನೇಶ್ ಗುಂಡೂರಾವ್ ರವರ ಈ ನಿರ್ಣಯವನ್ನು ಖಂಡಿಸುವೆ. ಸರಕಾರಿ ಆಸ್ಪತ್ರೆಯಲ್ಲಿ ಔಷಧ ಸಿಗುತ್ತಿಲ್ಲ ಅಥವಾ ಲಭ್ಯವಿಲ್ಲ ಎಂದಾಗ ಕನಿಷ್ಠ ಪಕ್ಷ ರೋಗಿಗಳು ಕಡಿಮೆಯ ಖರ್ಚಿನಲ್ಲಿ ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಜನ ಔಷಧಿ ಕೇಂದ್ರದಲ್ಲಾದರೂ ಖರೀದಿಸುವ ಅನುಕೂಲವಿತ್ತು, ತಮ್ಮ ವೈಯಕ್ತಿಕ ರಾಜ–ಕಾರಣದಿಂದ ಈ ನಿರ್ಣಯ ಅದೆಷ್ಟೋ ರೋಗಿಗಳಿಗೆ ತೊಂದರೆ ಕೊಡುತ್ತಿದೆ ಎಂದರು.

ಈ ಸದರ್ಭದಲ್ಲಿ ಮಾಜಿ ಸಚಿವರಾದ ಅಪ್ಪಾಸಾಹೇಬ ಪಟ್ಟಣಶೆಟ್ಟಿ, ಬೆಳಗಾವಿ ವಿಭಾಗದ ಪ್ರಭಾರಿಗಳಾದ ಚಂದ್ರಶೇಖರ ಕವಟಗಿ, ಬೀಜ ಮತ್ತು ಸಾವಯವ ನಿಗಮದ ಮಾಜಿ ಅಧ್ಯಕ್ಷರಾದ ವಿಜುಗೌಡ ಪಾಟೀಲ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಈರಣ್ಣ ರಾವೂರ, ಸಾಬು ಮಾಶ್ಯಾಳ, ಮಳುಗೌಡ ಪಾಟೀಲ, ಬಿಜೆಪಿ ಮುಖಂಡರಾದ ಸುರೇಶ ಬಿರಾದಾರ, ಉಮೇಶ ಕೋಳಕೂರ, ಸಂ–ಜಯ ಐಹೊಳ್ಳಿ, ಎಸ್.ಎ.ಪಾಟೀಲ, ವಿಜಯ ಜೋಶಿ, ರವಿಕಾಂತ ಬಗಲಿ, ಕಾಂತು ಶಿಂಧೆ, ರಾಜೇಶ ತವಸೆ, ಮಂಜುನಾಥ ಬಿಸೆ, ಪಾಪುಸಿಂಗ ರಜಪೂತ, ಚನ್ನು ಚಿನಗುಂಡಿ, ಸಿದ್ದು ಮಲ್ಲಿಕಾರ್ಜುನಮಠ, ಬಸವರಾಜ ಬೈಚಬಾಳ, ಮಹಾನಗರ ಪಾಲಿಕೆ ಸದಸ್ಯರಾದ ರಾಹಲ ಜಾಧವ, ಕಲ್ಮೇಶ ಹಿರೇಮಠ, ಸಂತೋಷ ನಿಂಬರಗಿ, ಸಂದೀಪ ಪಾಟೀಲ, ಸಂಪತ ಕೋಹಳ್ಳಿ, ಸುಮಂಗಲಾ ಕೋಟಿ, ಮಂಗಲಾ, ಛಾಯಾ ಮಸಿ, ಭಾರತಿ ಭುಯ್ಯಾರ, ಭಾರತಿ ಶಿವಣಗಿ, ಸುಶ್ಮಿತಾ ವಡಕರ ಸೇರಿದಂತೆ ಬಿಜೆಪಿಯ ಹಲವಾರು ಕಾರ್ಯಕರ್ತರು ಉಪಸ್ಥಿತ–ರಿದ್ದರು.

# ರೈತ ಸಂಪರ್ಕ ಕೇಂದ್ರದಿಂದ ರೈತರಿಗೆ ಬೀಜ ಹಾಗೂ ಗೊಬ್ಬರ ವಿತರಣೆ



**ಕೊಲ್ಹಾರ :** ಪಟ್ಟಣದ ರೈತ ಸಂಪರ್ಕ ಕೇಂದ್ರದಲ್ಲಿ 2025–26 ನೇ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜಗಳ ವಿತರಣೆ ಸಮಾರಂಭ ಶುಕ್ರವಾರ ನಡೆಯಿತು.

ಪಟ್ಟಣದ ರೈತ ಸಂಪರ್ಕ ಕೇಂದ್ರದಲ್ಲಿ ಮುಂಗಾರು ಹಂಗಾಮಿನ ಬಿತ್ತನೆ ಬೀಜಗಳ ವಿತರಣೆ ಸಮಾರಂಭಕ್ಕೆ ಪಟ್ಟಣ ಪಂಚಾಯಿತಿ ಅಧ್ಯಕ್ಷ ಚನ್ನಮಲ್ಲಪ್ಪ ಗಿಡ್ಡಪ್ಪಗೋಳ ಚಾಲನೆ ನೀಡಿ ರೈತರು ಸರ್ಕಾರ ನೀಡುವ ಈ ಬೀಜಗಳನ್ನು ಹಾಗೂ ಪೊ?ಷಕಾಂಶ ಗೊಬ್ಬರಗಳನ್ನು ಈ ರೈತ ಸಂಪರ್ಕ ಕೇಂದ್ರಕ್ಕೆ ಬಂದು ಪಡೆದುಕೊಂಡು ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳನ್ನು ನಾವು ನೀವು ಪಡೆದು ಕೊಳ್ಳೋಣ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಸದಸ್ಯೆ ಲಕ್ಷ್ಮೀಬಾಯಿ ಹೆರಕಲ್, ರೈತ ಸಂಪರ್ಕ ಕೇಂದ್ರದ ಅಧಿಕಾರಿ ಎಂ ಕೆ ಪುರೋಹಿತ, ಎಂ ಕೆ ಲಮಾಣಿ, ಎಂ ಪಿ ಸರೂರ, ಬೀರಮಣ್ಣ ಕಾರಜೋಳ, ಡಿ ಕೆ ಧನಗೊಂಡ ಹಾಗೂ ಹಲವು ಗ್ರಾಮದ ರೈತರು ಭಾಗವಹಿಸಿದ್ದರು.

# ಬಿಎಲ್‌ಡಿಇ ಎಂಜಿನಿಯರಿಂಗ್ ಕಾಲೇಜಿಗೆ 28ನೇ ರ್‍ಯಾಂಕ್

**ವಿಜಯಪುರ :** ನಗರದ ಪ್ರತಿಷ್ಠಿತ ಬಿ.ಎಲ್.ಡಿ.ಇ ಸಂಸ್ಥೆಯ ವಚನಪಿತಾಮಹ ಡಾ. ಫ. ಗು. ಹಳಕಟ್ಟಿ ಎಂಜಿನಿಯರಿಂಗ್ ಕಾಲೇಜಿಗೆ ದೇಶದ ಉನ್ನತ ಕಾಲೇಜುಗಳಲ್ಲಿ 28ನೇ ಯಾ‌ರ್ಂಕ್ ಲಭಿಸಿದೆ.

ನ್ಯಾಷನಲ್ ಟೈಮ್ಸ್ ಎಂಜಿನಿಯರಿಂಗ್ ಯಾ‌ರ್ಂಕಿಂಗ್ ನಡೆಸಿದ ಸಮೀಕ್ಷೆಯಲ್ಲಿ ಈ ಸ್ಥಾನ ಪ್ರಾಪ್ತವಾಗಿದೆ. ಈ ಸಂಸ್ಥೆ ದೇಶದ ನಾನಾ ಎಂಜಿನಿಯರಿಂಗ್ ಕಾಲೇಜುಗಳಲ್ಲಿ



ಸಮೀಕ್ಷೆ ನಡೆಸಿದ್ದು, ಬಿ.ಎಲ್.ಡಿ.ಇ ಎಂಜಿನಿಯರಿಂಗ್ ಕಾಲೇಜಿಗೆ ದೇಶದ ಉನ್ನತ 125 ಕಾಲೇಜುಗಳ ಪೈಕಿ 28 ಯಾ‌ರ್ಂಕ್ ಲಭಿಸಿದೆ.

ಅಷ್ಟೇ ಅಲ್ಲ, ಕಾಲೇಜಿನ ವಿದ್ಯಾರ್ಥಿಗಳಿಗೆ ಉದ್ಯೋಗ ವ್ಯವಸ್ಥೆ ಮಾಡುವಲ್ಲಿ ದೇಶದ ಉನ್ನತ 70 ಖಾಸಗಿ ಕಾಲೇಜುಗಳ ಪೈಕಿ ಬಿ.ಎಲ್.ಡಿ.ಇ ಎಂಜಿನಿಯರಿಂಗ್ ಕಾಲೇಜಿಗೆ 45ನೇ ಯಾ‌ರ್ಂಕ್ ಬಂದಿದೆ. ಇದರ ಜೊತೆಗೆ ದಕ್ಷಿಣ ಭಾರತದ ಉನ್ನತ ಎಂಜಿನಿಯರಿಂಗ್ ಕಾಲೇಜು ವಿಭಾಗಗಳಲ್ಲಿ 15ನೇ ಯಾ‌ರ್ಂಕ್ ಲಭಿಸಿದೆ.

ಕಾಲೇಜಿನ ಈ ಸಾಧನೆಗೆ ಬಿ.ಎಲ್.ಡಿ.ಇ ಸಂಸ್ಥೆಯ ಅಧ್ಯಕ್ಷ ಮತ್ತು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ, ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಮತ್ತು ವಿಧಾನ ಪರಿಷತ ಶಾಸಕ ಸುನೀಲಗೌಡ ಪಾಟೀಲ ಸಂತಸ ವ್ಯಕ್ತಪಡಿಸಿದ್ದು, ಕಾಲೇಜಿನ ಎಲ್ಲ ಆಡಳಿತ ಮಂಡಳಿ, ಬೋಧಕ ಮತ್ತು ಬೋಧಕರ ಹೊರತಾದ ಸಿಬ್ಬಂದಿ ವಿದ್ಯಾರ್ಥಿಗಳಿಗೆ ಅಭಿನಂದನೆ ಸಲ್ಲಿಸಿದ್ದಾರೆ.

# ಜೀವ, ಜೀವನ ಮೌಲ್ಯ ಅರಿತು ತಂಬಾಕುನಿಂದ ದೂರವಿರಿ

## ಜಾಥಾಕ್ಕೆ ಚಾಲನೆ ನೀಡಿ ಸಿವಿಲ್ ನ್ಯಾಯಾಧೀಶರಾದ ಪ್ರಶಾಂತ್ ನಾಗಲಾಪುರ್

**ಹೊಸಪೇಟೆ :** ದುಶ್ಚಟಗಳಿಗೆ ದಾಸರಾಗುವ ಮುನ್ನ ನಿಮ್ಮ ಜೀವ ಮತ್ತು ಜೀವನದ ಮೌಲ್ಯ ಅರಿತರೇ ತಂಬಾಕು ಉತ್ಪನ್ನಗಳಿಂದ ದೂರವಿರಲು ಸಾಧ್ಯವಾಗಲಿದೆ ಎಂದು ಗೌರವಾನ್ವಿತ ಸಿವಿಲ್ ನ್ಯಾಯಾಧೀಶರಾದ ಪ್ರಶಾಂತ್ ನಾಗಲಾಪುರ ಹೇಳಿದರು.

ನಗರದಲ್ಲಿ ಜಿಲ್ಲಾಡಳಿತ, ಜಿಪಂ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾ ಘಟಕ, ಪೊಲೀಸ್ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ತಾಲೂಕು ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ವಿಶ್ವ ತಂಬಾಕು ರಹಿತ ದಿನಾಚರಣೆ ನಿಮಿತ್ತ ಏರ್ಪಡಿಸಿದ್ದ ಜಾಗೃತಿ ಜಾಥಕ್ಕೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ ಶನಿವಾರ ಅವರು ಮಾತನಾಡಿದರು.





ತಂಬಾಕು ಮತ್ತು ನಿಕೋಟಿನಂತಹ ಉತ್ಪನ್ನಗಳಿಗೆ ಯುವಜನತೆ ಹೆಚ್ಚು ಆಕರ್ಷಿತರಾಗುತ್ತಿದ್ದಾರೆ. ಭಾರತದಲ್ಲಿ ಸುಮಾರು 26.7 ಕೋಟಿಗೂ ಅಧಿಕ ಜನ ತಂಬಾಕು ಬಳಕೆದಾರರಿದ್ದು, ಪ್ರತಿ ವರ್ಷ 13.5 ಲಕ್ಷಕ್ಕೂ ಹೆಚ್ಚು ಜನರು ತಂಬಾಕು ಸೇವನೆ ಸಂಬಂಧಿತ ಕಾಯಿಲೆಗಳಿಂದ ಸಾವಿಗೀಡಾಗಿದ್ದಾರೆ.ವಿಪರ್ಯಾಸವೆಂದರೇ ಶೇ.47.6 ರಷ್ಟು ತಂಬಾಕು ಬಳಕೆದಾರರು ಗ್ರಾಮೀಣ ಪ್ರದೇಶದವರಾಗಿದ್ದು, ಕರ್ನಾಟಕದಲ್ಲಿ ಶೇ.22.8 ರಷ್ಟು ವ್ಯಕ್ತಿಗಳು ಯಾವುದಾದರೊಂದು ರೀತಿಯ ತಂಬಾಕು ಉತ್ಪನ್ನಗಳನ್ನು ಸೇವನೆ ಮಾಡುತ್ತಿದಾರೆ. ಆರೋಗ್ಯಕರ ಜೀವನ ನಡೆಸುವ ನಿಟ್ಟಿನಲ್ಲಿ ಸಾರ್ವಜನಿಕರು ತಂಬಾಕು ಉತ್ಪನ್ನಗಳ ಕರಾಳ ಉದ್ದೇಶಗಳನ್ನು ಅರಿತುಕೊಳ್ಳಬೇಕು. ತಂಬಾಕು ಮುಕ್ತ ಜಿಲ್ಲೆಯನ್ನಾಗಿಸಲು ಸಾರ್ವಜನಿಕರ ಸಹಕಾರ ಬಹಳ ಮುಖ್ಯವಾಗಿದೆ. ತಂಬಾಕು ಬಳಕೆಯಿಂದ ಹೃದಯ ಸಂಬಂಧಿ ಹಾಗೂ ಕ್ಯಾನ್ಸರ್ ಕಾಯಿಲೆಗೆ ತುತ್ತಾಗುತ್ತಿದ್ದಾರೆ. ಬಾಯಿ, ರಕ್ತನಾಳಕ್ಕೆ ಹಾನಿ, ಕುತ್ತಿಗೆ ಮತ್ತು ಶಿರದ ಕ್ಯಾನ್ಸರ್, ಗಂಟಲು ಕ್ಯಾನ್ಸರ್, ಧ್ವನಿಪೆಟ್ಟಿಗೆ, ಮಿದುಳು, ಅನ್ನನಾಳ, ಶ್ವಾಸಕೋಶ, ಮೂತ್ರಪಿಂಡ, ಸ್ತನ ಕ್ಯಾನ್ಸರ್ ಸೇರಿದಂತೆ ದೇಹದ ವಿವಿಧ ಅಂಗಾಗಗಳಿಗೆ ಕ್ಯಾನ್ಸರ್‌ಗೆ ಕಾರಣವಾಗಲಿದೆ. ಸಾರ್ವಜನಿಕವಾಗಿ ತಂಬಾಕು ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ಸರ್ಕಾರ ಮತ್ತು ಸಂಘ–ಸಂಸ್ಥೆಗಳಿಂದ ಹೆಚ್ಚೆಚ್ಚು ಜಾಗೃತಿ ಮೂಡಿಸುವ ಕಾರ್ಯವಾಗಬೇಕಿದೆ ಎಂದರು.

ಅಪರ ಸಿವಿಲ್ ನ್ಯಾಯಾಧೀಶರಾದ ಶೃತಿ ತೇಲಿ ಅವರು ಮಾತನಾಡಿ, ಮಾಧ್ಯಮಗಳಲ್ಲಿ, ಸಾಮಾಜಿಕ ಜಾಲತಾಣಗಳಲ್ಲಿ ತಂಬಾಕು ಮತ್ತು ಗುಟ್ಕಾ ಉತ್ಪನ್ನಗಳಿಗೆ ಆಕರ್ಷಣೀಯ ಜಾಹಿರಾತುಗಳು ಜನರನ್ನು ದಿಕ್ಕು ತಪ್ಪಿಸುತ್ತಿವೆ. ಚಿತ್ರನಟರೇ ಗುಟ್ಕಾ, ತಂಬಾಕು ಕಂಪನಿಗಳ ರಾಯಭಾರಿಯಾಗಿದ್ದಾರೆ. ಇದು ಸಾರ್ವಜನಿಕರ ಮೇಲೆ ತುಂಬಾ ಪ್ರಭಾವ ಮೂಡಿಸುತ್ತದೆ. ಮಹಿಳೆಯರು, ಮಕ್ಕಳು ತಂಬಾಕು, ಗುಟ್ಕಾದಂತಹ ದುಶ್ಚಟಗಳಿಗೆ ದಾಸರಾಗುತ್ತಿರುವುದು ಶೋಚನೀಯ.

ಇದಕ್ಕೂ ಮುನ್ನಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆವರಣದಿಂದ ವಿವಿಧ ಪ್ರಮುಖ ಬೀದಿಗಳಲ್ಲಿ ಮೂಲಕ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದವರೆಗೆ ಜಾಗೃತಿ ಜಾಥಾ ನಡೆಸಲಾಯಿತು. ಇದೇ ವೇಳೆ ಜಿಲ್ಲಾ ಆರೋಗ್ಯ ಅಧಿಕಾರಿ ಡಾ.ಶಂಕರನಾಯ್ಕ.ಎಲ್ ಮಾತನಾಡಿದರು. ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಧರ್ಮನಗೌಡರವರು ತಂಬಾಕು ನಿಯಂತ್ರಣ ಮಾಡುವಂತೆ ಪ್ರತಿಜ್ಞಾ ವಿಧಿ ಭೋದಿಸಿದರು.

ಜಾಥಾದಲ್ಲಿ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಅಧಿಕಾರಿ ಡಾ.ಭಾಸ್ಕರ್, ವೈದ್ಯಾಧಿಕಾರಿ ಡಾ.ವಿನೋದ ಕುಮಾರ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಷಣ್ಮುಖ, ಜಿಲ್ಲಾ ಕುಷ್ಠರೋಗದ ನಿಯಂತ್ರಣ ಅಧಿಕಾರಿ ಡಾ.ರಾಧಿಕಾ, ತಾಲೂಕು ಆರೋಗ್ಯ ಅಧಿಕಾರಿ ಡಾ.ಬಸವರಾಜ, ತಂಬಾಕು ನಿಯಂತ್ರಣ ಕೋಶದ ಸಂಯೋಜಕ ಮಹಾಂತೇಶ್.ಬಿ. ಉಳ್ಳಾಗಡ್ಡಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಎಂ.ಪಿ.ದೊಡ್ಡಮನಿ ಸೇರಿದಂತೆ ಶ್ರೀಸಪ್ತಗಿರಿ ವಿದ್ಯಾಲಯದ ನರ್ಸಿಂಗ್ ವಿದ್ಯಾರ್ಥಿಗಳು, ಟಿಎಂಎಇ ಸಂಸ್ಥೆಯ ನರ್ಸಿಂಗ್ ವಿದ್ಯಾರ್ಥಿಗಳು, ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರ ವಿಶ್ವವಿದ್ಯಾಲಯ ಟ್ರಸ್ಟ್ನ ಪದಾಧಿಕಾರಿಗಳು, ಆರೋಗ್ಯ ಇಲಾಖೆ ಸಿಬ್ಬಂದಿಗಳು ಭಾಗವಹಿಸಿದ್ದರು.

# ಗ್ರಾಮ ಲೆಕ್ಕಾಧಿಕಾರಿಗಳಿಗೆ ಲ್ಯಾಪಟಾಪ ವಿತರಿಸಿದ ಶಾಸಕ ಲಕ್ಷ್ಮಣ ಸವದಿ



**ಅಥಣಿ :** ಕಂದಾಯ ಯೋಜನೆ ಅನುಷ್ಠಾನಗೊಳಿಸುವ ಉದ್ದೇಶದಿಂದ ಕಂದಾಯ ಇಲಾಖೆಯಲ್ಲಿ ಪ್ರಸ್ತುತ ನಿರ್ವಹಿಸುತ್ತಿರುವ ವಿವಿಧ ಐಟಿ ವ್ಯವಸ್ಥೆಗಳನ್ನು ಬಗರ ಹುಕ್ಕುಂ ತಂತ್ರಾಂಶ, ಪೋಡಿ ಪ್ರಕರಣ ,ತಂತ್ರಾಂಶ, ಪಹಣಿ ದಾಖಲೆಗಳೊಂದಿಗೆ ಆಧಾರ ಜೋಡಣೆ, ಸರಕಾರಿ ಜಮೀನುಗಳ ಸಂರಕ್ಷಣೆ, ಲ್ಯಾಂಡ್ ಬೀಡ್ ಯೋಜನೆಯನ್ನು ಅತ್ಯುತ್ತಮ ಪ್ರಗತಿ ಸಾಧಿಸುವ ನಿಟ್ಟಿನಲ್ಲಿ ಅಥಣಿ ತಾಲೂಕಿನ 11 ಹಾಗೂ ತೆಲಸಂಗ ಹೋಬಳಿಯ 11 ಒಟ್ಟು 22 ಗ್ರಾಮ ಆಡಳಿತ ಅಧಿಕಾರಿಗಳಿಗೆ ಲ್ಯಾಪ್ ಟ್ಯಾಪ್‌ಗಳನ್ನು ತಹಶೀಲ್ದಾರ್ ಹಾಗೂ ತಾಲ್ಲೂಕ ದಂಡಾಧಿಕಾರಿ ಕಾರ್ಯಾಲಯ ವತಿಯಿಂದ ರಾಜ್ಯದ ಮಾಜಿ ಉಪಮುಖ್ಯಮಂತ್ರಿ ಹಾಗೂ ಶಾಸಕ ಲಕ್ಷ್ಮಣ ಸವದಿ ಹಂಚಿಕೆ ಮಾಡಿದರು.

ಲ್ಯಾಪ್ ಟ್ಯಾಪ್‌ಗಳನ್ನು ಹಂಚಿಕೆ ಮಾಡಿ ಮಾತನಾಡಿದ ಶಾಸಕ ಲಕ್ಷ್ಮಣ ಸವದಿ ಅವರು ದೇಶ ಹಾಗೂ ರಾಜ್ಯದಲ್ಲಿ. ಕಾಗದ ರಹಿತ ಹಾಗೂ ಈಗಿನ ವೇಗಕ್ಕೆ ಅನುಸಾರವಾಗಿ ಕಾರ್ಯಗಳನ್ನು ನಿರ್ವಹಿಸಲಿಕ್ಕೆ ಅನುಕೂಲಆಗುವನಿಟ್ಟಿನಲ್ಲಿರಾಜ್ಯಸರ್ಕಾರಕಂದಾಯ ಇಲಾಖೆ ವತಿಯಿಂದ ಗ್ರಾಮ ಆಡಳಿತ ಅಧಿಕಾರಿಗಳಿಗೆ ಉಚಿತ ಲ್ಯಾಪಟಾಪಗಳನ್ನು ಹಂಚಿಕೆ ಮಾಡುತ್ತಿದೆ ಈ ಯೋಜನೆಯಿಂದ ರೈತರಿಗೆ ಯಾವುದೇ ರೀತಿಯ ದಾಖಲೆಗಳನ್ನು ಪಡೆಯುವಲ್ಲಿ ಅನುಕೂಲ ವಾಗಲಿದೆ ಹಾಗೂ ಜನರಿಗೆ ಸುಲಭ ಹಾಗೂ ಪಾರದರ್ಶಕ ವ್ಯವಸ್ಥೆಯನ್ನು ಕಲ್ಪಿಸದಂತಾಗುತ್ತದೆ. ನಾನು ಗ್ರಾಮ ಲೆಕ್ಕಾಧಿಕಾರಿಗಳಲ್ಲಿ ಕೇಳಿಕೊಳ್ಳುವುದು ಇಷ್ಟೇ ಜನರ ಮಧ್ಯದಲ್ಲಿ ಇದ್ದುಕೊಂಡು ಜನರ ಸಮಸ್ಯಗಳಿಗೆ ಸ್ಪಂದಿಸುವ ಮೂಲಕ ಅವರು ತಂದಿರುವ ಅಹವಾಲುಗಳನ್ನು ತ್ವರಿತ ಗತಿಯಲ್ಲಿ ವಿಲೇವಾರಿ ಮಾಡಿ ಜನರ ಮನ್ನಣೆಯನ್ನು ಪಡೆದು ಕೊಳ್ಳಬೇಕು ಎಂದು ತಿಳಿಸಿದರು.

ಈ ವೇಳೆ ತಹಶೀಲ್ದಾರ ಸಿದರಾಯ ಬೋಸಗಿ ಉಪ ತಹಶೀಲ್ದಾರ್ ಮಹಾದೇವ ಬಿರಾದಾರ. ಕಂದಾಯ ನಿರೀಕ್ಷಕರಾದ ಎಸ್ ಬಿ ಮೆಣಸಂಗಿ. ಮುಬಾರಕ್ ಮುಜಾವರ ಮುಖಂಡರಾದ ಜಡೇಪ್ಪಾ ಕುಂಬಾರ. ಮಹಾಂತೇಶ ಠಕ್ಕಣ್ಣವರ. ಸೇರಿದಂತೆ ಅಥಣಿ ಮತ್ತು ತೆಲಸಂಗ ಹೋಬಳಿಯ ಗ್ರಾಮ ಆಡಳಿತಾಧಿಕಾರಿಗಳು ಉಪಸ್ಥಿತರಿದ್ದರು.


# ಗ್ರಾಮ ಲೆಕ್ಕಾಧಿಕಾರಿಗಳಿಗೆ ಲ್ಯಾಪಟಾಪ ವಿತರಿಸಿದ ಶಾಸಕ ಲಕ್ಷ್ಮಣ ಸವದಿ

**ಅಥಣಿ :** ಕಂದಾಯ ಯೋಜನೆ ಅ ನ ು ಷ ್ಠಾ ನ ಗ ೊ ಳ ಿ ಸ ು ವ ಉದ್ದೇಶದಿಂದ ಕಂದಾಯ ಇಲಾಖೆಯಲ್ಲಿ ಪ್ರಸ್ತುತ ನಿರ್ವಹಿಸುತ್ತಿರುವ ವಿವಿಧ ಐಟಿ ವ್ಯವಸ್ಥೆಗಳನ್ನು ಬಗರ ಹುಕ್ಕುಂ ತಂತ್ರಾಂಶ, ಪೋಡಿ ಪ್ರಕರಣ ,ತಂತ್ರಾಂಶ, ಪಹಣಿ ದಾಖಲೆಗಳೊಂದಿಗೆ ಆಧಾರ ಜೋಡಣೆ,ಸರಕಾರಿ ಜಮೀನುಗಳ ಸಂರಕ್ಷಣೆ, ಲ್ಯಾಂಡ್ ಬೀಡ್ ಯೋಜನೆಯನ್ನು ಅತ್ಯುತ್ತಮ ಪ್ರಗತಿ ಸಾಧಿಸುವ ನಿಟ್ಟಿನಲ್ಲಿ ಆಥಣಿ ತಾಲೂಕಿನ 11 ಹಾಗೂ ತೆಲಸಂಗ ಹೋಬಳಿಯ 11 ಒಟ್ಟು 22 ಗ್ರಾಮ ಆಡಳಿತ ಅಧಿಕಾರಿಗಳಿಗೆ ಲ್ಯಾಪ್ ಟ್ಯಾಪ್‌ಗಳನ್ನು ತಹಶೀಲ್ದಾರ್ ಹಾಗೂ ತಾಲ್ಲೂಕ ದಂಡಾಧಿಕಾರಿ ಕಾರ್ಯಾಲಯ ವತಿಯಿಂದ ರಾಜ್ಯದ ಮಾಜಿ ಉಪಮುಖ್ಯಮಂತ್ರಿ ಹಾಗೂ ಶಾಸಕ ಲಕ್ಷ್ಮಣ ಸವದಿ ಹಂಚಿಕೆ ಮಾಡಿದರು.

ಲ್ಯಾಪ್ ಟ್ಯಾಪ್‌ಗಳನ್ನು ಹಂಚಿಕೆ ಮಾಡಿ ಮಾತನಾಡಿದ ಶಾಸಕ ಲಕ್ಷ್ಮಣ ಸವದಿ ಅವರು ದೇಶ ಹಾಗೂ ರಾಜ್ಯದಲ್ಲಿ. ಕಾಗದ ರಹಿತ ಹಾಗೂ ಈಗಿನ ವೇಗಕ್ಕೆ ಅನುಸಾರವಾಗಿ ಕಾರ್ಯಗಳನ್ನು ನಿರ್ವಹಿಸಲಿಕ್ಕೆಅನುಕೂಲಆಗುವ ನಿಟ್ಟಿನಲ್ಲಿರಾಜ್ಯಸರ್ಕಾರಕಂದಾಯ ಇಲಾಖೆ ವತಿಯಿಂದ ಗ್ರಾಮ ಆಡಳಿತ ಅಧಿಕಾರಿಗಳಿಗೆ ಉಚಿತ ಲ್ಯಾಪಟಾಪಗಳನ್ನು ಹಂಚಿಕೆ ಮಾಡುತ್ತಿದೆ ಈ ಯೋಜನೆಯಿಂದ ರೈತರಿಗೆ ಯಾವುದೇ ರೀತಿಯ ದಾಖಲೆಗಳನ್ನು ಪಡೆಯುವಲ್ಲಿ ಅನುಕೂಲ ವಾಗಲಿದೆ ಹಾಗೂ ಜನರಿಗೆ ಸುಲಭ ಹಾಗೂ ಪಾರದರ್ಶಕ ವ್ಯವಸ್ಥೆಯನ್ನು ಕಲ್ಪಿಸದಂತಾಗುತ್ತದೆ. ನಾನು ಗ್ರಾಮ ಲೆಕ್ಕಾಧಿಕಾರಿಗಳಲ್ಲಿ ಕೇಳಿಕೊಳ್ಳುವುದು ಇಷ್ಟೇ ಜನರ ಮಧ್ಯದಲ್ಲಿ ಇದ್ದುಕೊಂಡು ಜನರ ಸಮಸ್ಯಗಳಿಗೆ ಸ್ಪಂದಿಸುವ ಮೂಲಕ ಅವರು ತಂದಿರುವ ಅಹವಾಲುಗಳನ್ನು ತ್ವರಿತ ಗತಿಯಲ್ಲಿ ವಿಲೇವಾರಿ ಮಾಡಿ ಜನರ ಮನ್ನಣೆಯನ್ನು ಪಡೆದು ಕೊಳ್ಳಬೇಕು ಎಂದು ತಿಳಿಸಿದರು.

ಈ ವೇಳೆ ತಹಶೀಲ್ದಾರ ಸಿದರಾಯ ಬೋಸಗಿ ಉಪ ತಹಶೀಲ್ದಾರ್ ಮಹಾದೇವ ಬಿರಾದಾರ. ಕಂದಾಯ ನಿರೀಕ್ಷಕರಾದ ಎಸ್ ಬಿ ಮೆಣಸಂಗಿ. ಮುಬಾರಕ್ ಮುಜಾವರ ಮುಖಂಡರಾದ ಜಡೇಪ್ಪಾಕುಂಬಾರ.ಮಹಾಂತೇಶ ಠಕ್ಕಣ್ಣವರ. ಸೇರಿದಂತೆ ಅಥಣಿ ಮತ್ತು ತೆಲಸಂಗ ಹೋಬಳಿಯ ಗ್ರಾಮ ಆಡಳಿತಾಧಿಕಾರಿಗಳು ಉಪಸ್ಥಿತರಿದ್ದರು.





**ಕಮಲಾಪುರದ ಪವರ್ ಹೌಸ್ ನ ಕೆರೆಯಲ್ಲಿ 80 ರ ಹರೆಯದ ಯಜಮಾನ ವೆಂಕಟೇಶ (ಸ್ವಾಮಿ) ಶವಾಸನದ ಭಂಗಿಯಲ್ಲಿ 45 ನಿಮಿಷಗಳ ಕಾಲ ನೀರಿನ ಮೇಲೆ ಮಲಗಿದ್ದನ್ನು ಕಂಡು ಜನ ನಿಬ್ಬೆರಗಾದರು.**

"SIHI KAHI" Kannada Daily Morning, Editor, Owner, Publisher, Printer by MARUTI BASAVANTAPPA HOASAMANI Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at SUDIN PRINTERS, Sector No. 33, Shop No. 38 & 40, Opp. Ambedkar Bhavan, NAVANAGAR, BAGALKOT-587 101. Dist : Bagalkot, Karnataka State